ಸಂಪುಟ : 9 ಸಂಚಿಕೆ 210 ಪುಟ : 4 ಬೆಲೆ: 3.00 ಶನಿವಾರ ಸೆಪ್ಟೆಂಬರ್ 28 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 210 Pages : 4 Price : 3.00 Saturday september 28 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವ್ಯವಸ್ಥಾಪಕರ ವಿರುದ್ಧ ಶಾಸಕರ ಆಕ್ರೋಶ



■ವಿಜಯಸಾಕ್ಷಿ ಸುದ್ದಿ, ರೋಣ

ಈ ಹಿಂದೆ ಪಟ್ಟಣದಲ್ಲಿ ನಿರ್ಮಾಣಗೊಂಡಿರುವ ಉಗ್ರಾಣ ಕಟ್ಟಡದ ವಿಚಾರವಾಗಿ ಶಾಸಕ ಜಿ.ಎಸ್. ಪಾಟೀಲರು ಬೀಜ ನಿಗಮದ ವ್ಯವಸ್ಥಾಪಕ ಪ್ರಮೋದ ಕುಲಕರ್ಣಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ ಘಟನೆ ಶುಕ್ರವಾರ ಎಪಿಎಂಸಿ ಆವರಣದಲ್ಲಿ ಜರುಗಿದ ಹಿಂಗಾರು ಬಿತ್ತನೆ ಬೀಜ ವಿತರಣೆ ಸಮಾರಂಭದಲ್ಲಿ ನಡೆಯಿತು.

ಅಲ್ಲಿ ಕಟ್ಟಡ ನಿರ್ಮಿಸಿದ್ದರೂ ಇಂದಿಗೂ ರೈತರಿಗೆ ಅನುಕೂಲವಾಗಿಲ್ಲ. ಮುಖ್ಯವಾಗಿ ಸ್ವತಃ ನೀವೇ ನಿರ್ಮಿಸಿದ ಕಟ್ಟಡದ ಬಳಿ ಹೋಗಿಲ್ಲ. ಅಲ್ಲಿನ ಸ್ಥಿತಿ ಹೇಗಿದೆ ಎಂಬ ತಿಳುವಳಿಕೆ ಕೂಡ ನಿಮಗಿಲ್ಲ. ಯಾವ ಕಾರಣಕ್ಕೆ ಉಗ್ರಾಣ ಕಟ್ಟಡ ರೈತರಿಗೆ ಲಭ್ಯವಾಗಿಲ್ಲ ಎಂದು ವ್ಯವಸ್ಥಾಪಕರನ್ನು ತರಾಟೆಗೆ ತೆಗೆದುಕೊಂಡರು.

ಆಗ ಪ್ರಮೋದ ಕುಲಕರ್ಣಿ ಪ್ರತಿಕ್ರಿಸಿ, ಅಲ್ಲಿ ಹಲವಾರು ಸಮಸ್ಯೆಗಳಿವೆ ಎಂದು ಕಾರಣ ಹೇಳುತ್ತಿದ್ದಂತೆ, ಸಮಸ್ಯೆಗಳಿವೆ ಎನ್ನುವ ವಿಚಾರ ತಿಳಿದಿದ್ದರೂ ಸಹ ಕಟ್ಟಡ ಏಕೆ ನಿರ್ಮಿಸಿದಿರಿ, ಈ ಹಿಂದೆ ನಮ್ಮ ತಾಲೂಕಿಗೆ ಮಂಜೂರಾಗಿದ್ದ ವಿದ್ಯಾಲಯವೂ ಬೇರೆ ಕಡೆಗೆ ಹೋಯಿತು. ಈಗ ಈ ಕಟ್ಟಡವೂ ಅದರಂತೆಯೇ ಆಗಬೇಕೇ, ನಿಮಗೆ ಕರ್ತವ್ಯದ ಬಗ್ಗೆ ಅರಿವಿಲ್ಲವೇ ಎಂದು ಪ್ರಶ್ನಿಸಿದರಲ್ಲದೆ, ಒಂದು ದಿನವಾದರೂ ಅಲ್ಲಿನ ವಸ್ತುಸ್ಥಿತಿಯನ್ನು ನನಗೆ ತಿಳಿಸಿದ್ದೀರಾ ಎಂದು ಬೇಸರ ವ್ಯಕ್ತಪಡಿಸಿದರು.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 28 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 29ರಲ್ಲಿ ಟೀಚರ್ಸ್ ಕಾಲೋನಿ, ಸುಡಗಾಡ ಸಿದ್ದರ ಕಾಲೋನಿ, ಕೆಲವು ಉಳಿದ ಭಾಗಗಳು, ವಾರ್ಡ್ ನಂ.22 ಗಂಗಿಮಡಿ ದೊಡ್ಡ ಮಸೂತಿಯ ಭಾಗಗಳು, 1600, 1400, 1800, ಮನೆಗಳ ಲೈನ್, ಕೆಲವು ಉಳಿದ ಭಾಗಗಳು. ವಾರ್ಡ್ ನಂ. 06ರಲ್ಲಿ ಪಿ.ಪಿ.ಗುಡಿ ಲೈನ್, ಮಿಸ್ಕಿನ್ ಪ್ಲಾಟ್, ಮಾಕಾಪೂರ ಲೈನ್, ಪವಾರ ಲೈನ್, ನಾವಳ್ಳಿ, ಮಳಲಿ ಪೂಜಾರ, ಫಣಿಬಂದ ಲೈನ್, ತಟ್ಟಿಯವರ ಲೈನ್, ಕೆಲವು ಉಳಿದ ಭಾಗಗಳು,

ವಾರ್ಡ್ ನಂ. 12ರಲ್ಲಿ ಕಾಶಿ ವಿಶ್ವನಾಥಗುಡಿ ಲೈನ್, 16ನಂ. ಶಾಲೆ, ಹನಮಂತ ಗುಡಿ ಲೈನ್, ಗಣಪತಿ ಕಟ್ಟಿ, ಗಾರ್ಡನ್ ಲೈನ್, ಗಾಣಗೇರ ಭವನ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 29ರಲ್ಲಿ ಹೊಸ ಹುಡ್ಕೋ ಲೈನ್, ವಾರ್ಡ್ ನಂ. 31, 32ರಲ್ಲಿ ದಾಸರ ಓಣಿ, ಭಜಂತ್ರಿ ಓಣಿ, ಸಿಕ್ಕಲಗಾರ ಓಣಿ, ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಕ ವರ್ಗಾವಣೆಗೊಂಡಿದ್ದಕ್ಕೆ ಕಣ್ಣೀರಿಟ್ಟ ವಿದ್ಯಾರ್ಥಿಗಳು



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ತಾಲೂಕಿನ ಮೈನಳ್ಳಿ ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ಕುಮಾರ್ ಡಿ. ವರ್ಗಾವಣೆಗೊಂಡಿದ್ದಕ್ಕೆ ವಿದ್ಯಾರ್ಥಿಗಳೆಲ್ಲರೂ ಕಣ್ಣೀರು ಹಾಕಿದ್ದಾರೆ.

17 ವರ್ಷಗಳ ಕಾಲ ಮೈನಳ್ಳಿಯ ಶಾಲೆಯಲ್ಲಿಯೇ ಬೋಧನೆ ಮಾಡುತ್ತಿದ್ದ ಶಿಕ್ಷಕ ಕುಮಾರನನ್ನು ವಿದ್ಯಾರ್ಥಿಗಳೆಲ್ಲರೂ ಬಹಳಷ್ಟು ಹಚ್ಚಿಕೊಂಡಿದ್ದರು. ಮೂಲತಃ ಶಿವಮೊಗ್ಗ ಜಿಲ್ಲೆಯವರಾದ ಕುಮಾರ್, ಸ್ವಜಿಲ್ಲೆಯ ಶಿಕ್ಷಣ ಸಚಿವ ಮಧುಬಂಗಾರಪ್ಪನವರ ಸ್ವಕ್ಷೇತ್ರ ಸೊರಬದ ಕಲ್ಲಂಬಿ ಗ್ರಾಮದ ಶಾಲೆಗೆ ವರ್ಗಾವಣೆಗೊಂಡಿದ್ದಾರೆ.

ಕುಟುಂಬಸ್ಥರೆಲ್ಲರೂ ಅದೇ ಜಿಲ್ಲೆಯವರಾಗಿದ್ದು, ಶಿಕ್ಷಕ ಕುಮಾರ್‌ಗೆ ಅನುಕೂಲ ಆಗಲಿದೆ.

ಬೀಳ್ಕೊಡುವಾಗ ಮಕ್ಕಳೆಲ್ಲರೂ ಶಿಕ್ಷಕ ಕುಮಾರನನ್ನು ಸುತ್ತುವರೆದು, ತಮ್ಮನ್ನು ಬಿಟ್ಟು ಹೋಗದಂತೆ ಕಣ್ಣೀರಾಕುತ್ತಿದ್ದರು. ಕೆಲವು ವಿದ್ಯಾರ್ಥಿಗಳು ಶಿಕ್ಷಕನ ಕಾಲಿಗೆ ಬಿದ್ದು, ಆಶೀರ್ವಾದ ಪಡೆದರು. ಇನ್ನು ಕೆಲವರು ಅಪ್ಪಿಕೊಂಡರು. ನೆಚ್ಚಿನ ಶಿಕ್ಷಕ ಶಾಲೆ ತೊರೆಯುತ್ತಿರುವುದನ್ನು ಅರಗಿಸಿಕೊಳ್ಳದ ವಿದ್ಯಾರ್ಥಿಗಳು ಕಂಬನಿ ಮಿಡಿದರು. ಶಿಕ್ಷಕ ಕುಮಾರ್ ಮತ್ತು ಶಾಲೆಯ ಪ್ರಾಚಾರ್ಯ ಶಂಭುಲಿಂಗನಗೌಡ್ರು ಹಲಗೇರಿ ಸೇರಿ ವಿದ್ಯಾರ್ಥಿಗಳಿಗೆ ಸಮಾಧಾನ ಮಾಡಲು ಹರಸಾಹಸ ಪಟ್ಟರು.

### ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಡಾ. ಎಚ್.ಕೆ. ಪಾಟೀಲ ಸೂಚನೆ

## ಜನಪ್ರತಿನಿಧಿಗಳ ಮಾರ್ಗದರ್ಶನದಲ್ಲಿ ಕೆಲಸ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ ಭವನ, ಎಸ್.ಪಿ. ಕಚೇರಿ, ಎಸಿ ಕಚೇರಿ, ಜಿಮ್ಸ್ ಸೇರಿದಂತೆ ಸರ್ಕಾರಿ ಶಾಲಾ-ಕಾಲೇಜು ಹಾಗೂ ಹಾಸ್ಟೆಲ್‌ಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ಉದ್ಯಾನವನ ಅಭಿವೃದ್ಧಿಪಡಿಸಿ ನಿರ್ವಹಿಸಬೇಕೆಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿನ 7 ತಾಲೂಕುಗಳಲ್ಲಿ ತಲಾ ಒಂದು ಲಕ್ಷ ಗಿಡ ನೆಡುವ ಕೆಲಸವಾಗಬೇಕು. ಸಸಿ ನೆಡುವ ಕಾರ್ಯಕ್ರಮದ ಯೋಜನೆ ತಯಾರಿಸಿ ವಿವರವಾದ ಮಾಹಿತಿಯೊಂದಿಗೆ ಆಯಾ ತಾಲೂಕಿನ ಜನಪ್ರತಿನಿಧಿಗಳ ಮಾರ್ಗದರ್ಶನ ಪಡೆದು ಕೆಲಸ ನಿರ್ವಹಿಸಬೇಕು ಎಂದರು.



ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ್ ಮಾತನಾಡಿ, ಅಕಾಲಿಕ ಮಳೆಯಿಂದ ಹಾನಿಗೊಳಗಾದ ತೋಟಗಾರಿಕಾ ಪ್ರದೇಶದ ಪರಿಹಾರ ವಿತರಣೆಗೆ ಕ್ರಮ ಕೈಗೊಳ್ಳಬೇಕು. ಜನತಾ ದರ್ಶನ ಕಾರ್ಯಕ್ರಮದಲ್ಲಿ ಸ್ವೀಕರಿಸಿದ ಅರ್ಜಿ ಶೀಘ್ರವಾಗಿ ವಿಲೇವಾರಿಯಾಗುವಂತೆ ಕ್ರಮ ಕೈಕೊಳ್ಳಬೇಕು ಎಂದರು.

> ಗದಗ ತಾಲೂಕಿನಲ್ಲಿ ಸುಮಾರು 8 ಗ್ರಾಮಗಳಲ್ಲಿ ಸ್ಮಶಾನದ (ರುದ್ರಭೂಮಿಯ) ಸಮಸ್ಯೆಯಿದ್ದು, ಈ ಕುರಿತು ನವೆಂಬರ್ 1ರೊಳಗೆ ರುದ್ರಭೂಮಿಗೆ ಸ್ಥಳ ಗುರುತಿಸಿ ಕ್ರಮ ಕೈಗೊಳ್ಳಬೇಕು. ರುದ್ರಭೂಮಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುವ ಹಾಗೆ ನೋಡಿಕೊಳ್ಳಬೇಕು. ಸಾರ್ವಜನಿಕರಿಗೆ ಪಡಿತರ ಚೀಟಿ ವಿತರಣೆ ಮಾಡುವಾಗ ಯಾವುದೇ ಅವ್ಯವಹಾರ ಆಗದಂತೆ ನೋಡಿಕೊಳ್ಳಬೇಕು.
>
> **– ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

ಹಿಂದುಳಿದ, ಅಲ್ಪಸಂಖ್ಯಾತರ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸುತ್ತಿರುವ ವಸತಿ ಶಾಲೆಗಳಲ್ಲಿ ಗುಣಮಟ್ಟದ ಆಹಾರ ಪೂರೈಕೆಯಾಗುವಂತೆ ನೋಡಿಕೊಳ್ಳಬೇಕು.

ಈ ನಿಟ್ಟಿನಲ್ಲಿ ಹಿರಿಯ ಅಧಿಕಾರಿಗಳು ಅನಿರೀಕ್ಷಿತವಾಗಿ ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಮಾತನಾಡಿ, ಕಂದಾಯ ಇಲಾಖೆಯಲ್ಲಿ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು, ಅರ್ಹ ಫಲಾನುಭವಿಗಳಿಗೆ ನೇರವಾಗಿ ಅವರ ಖಾತೆಗಳಿಗೆ ಹಣ ಜಮೆ ಮಾಡಲಾಗುತ್ತಿದೆ. ಸಕಾಲ ಯೋಜನೆಯಡಿ ಸ್ವಿಕೃತ ಅರ್ಜಿಗಳು ನಿಗದಿತ ಕಾಲದಲ್ಲಿಯೇ ವಿಲೇವಾರಿಯಾಗುತ್ತಿದ್ದು, ರಾಜ್ಯದಲ್ಲಿಯೇ ಜಿಲ್ಲೆಯು ಅಗ್ರಸ್ಥಾನದಲ್ಲಿದೆ ಎಂದು ತಿಳಿಸಿದರು.

▶▶3ನೇ ಪುಟಕ್ಕೆ

### ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

## ಯುವಕರು ಪರಿಪೂರ್ಣ ವ್ಯಕ್ತಿತ್ವ ನಿರ್ಮಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಕರು ದೇಶ ಸುತ್ತಿ ಕೋಶ ಓದಿ. ಅದರಿಂದ ಜ್ಞಾನ ಅನುಭವ ಹೊಂದಿ, ವ್ಯಕ್ತಿತ್ವವನ್ನು ಪಕ್ವಗೊಳಿಸಿಕೊಳ್ಳಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಕರೆ ನೀಡಿದರು.

ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಶುಕ್ರವಾರ ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ, ಎನ್‌ಎಸ್‌ಎಸ್ ಇವರುಗಳ ಸಹಯೋಗದಲ್ಲಿ ಜರುಗಿದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೆಲವು ಜನರ ಆಲೋಚನೆಯಂತೆ ಪ್ರವಾಸೋದ್ಯಮದಿಂದ ಆದಾಯ ಮತ್ತು ಉದ್ಯೋಗ ಸೃಷ್ಟಿ ಆಗುತ್ತದೆ. ಇನ್ನೂ ಕೆಲವರು ಪ್ರವಾಸೋದ್ಯಮ ಅಂದರೆ ಮನರಂಜನೆಯ ಕ್ಷೇತ್ರ ಎಂದು ಹೇಳುತ್ತಾರೆ. ನಿಜವಾಗಿ ನಮ್ಮ ಹಿರಿಯರು ಹೇಳಿದಂತೆ ದೇಶ ಸುತ್ತಿ, ಕೋಶ ಓದಿದಾಗ ಮಾತ್ರ ಪರಿಪೂರ್ಣ ವ್ಯಕ್ತಿತ್ವ ನಿರ್ಮಾಣ ಆಗುತ್ತದೆ ಎಂದು ಹೇಳಿದರು.

ವೀರನಾರಾಯಣ ದೇವಸ್ಥಾನದ ಮೂಲ ಮಂಟಪದರಲ್ಲಿರುವ ಶ್ರೇಷ್ಠ ಶಿಲಾ ಕೃತಿ, ವಾಸ್ತುಶಿಲ್ಪ ಗಮನಿಸಿದಾಗ




ಪ್ರೀತಿ-ಗೌರವ ಮೂಡುತ್ತದೆ. ಪ್ರವಾಸೋದ್ಯಮ ನೀತಿಯಲ್ಲಿ ಹೊಸದಾಗಿ ಬದಲಾವಣೆ ಮಾಡಿ ಶಾಲಾ-ಕಾಲೇಜು ಮಕ್ಕಳಿಗೆ ಪ್ರವಾಸ ಮಾಡಲು ಹೆಚ್ಚು ಅವಕಾಶ ಸೃಷ್ಟಿಸಿದಾಗ ಮಕ್ಕಳ ವ್ಯಕ್ತಿತ್ವ ನಿರ್ಮಾಣಕ್ಕೆ ಸಹಾಯಕವಾಗುತ್ತದೆ. ನಮ್ಮ ಜಿಲ್ಲೆಯಲ್ಲಿರುವ ಲಕ್ಕುಂಡಿಯನ್ನು ಯುನೆಸ್ಕೋ ಪಟ್ಟಿಗೆ ಸೇರಿಸಬೇಕೆಂದು ಕೂಗು ಕೇಳಿಬರುತ್ತಿದ್ದು, ಆದಷ್ಟು ಬೇಗ ಯುನೆಸ್ಕೋ ಪಟ್ಟಿಗೆ ಸೇರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಗದುಗಿನ ಕಪ್ಪತ್ತಗುಡ್ಡ ಅತ್ಯಂತ ಶುದ್ಧ ಗಾಳಿ ಹೊಂದಿ, ಹಸಿರಿನಿಂದ ಕೂಡಿ ಪ್ರವಾಸಿಗರನ್ನು ಕೈ ಬೀಸಿ ಕರೆಯುತ್ತದೆ. ಅಂತಹ ಪರಿಸರದಲ್ಲಿ ಸಮಯ ಕಳೆಯುವುದರಿಂದ ಮನಸ್ಸು ಶಾಂತವಾಗುತ್ತದೆ ಎಂದು ನುಡಿದರು.

> ಹೊಯ್ಸಳ ದೊರೆ ವಿಷ್ಣುವರ್ಧನನ ಕಾಲದಲ್ಲಿ ಗದುಗಿನ ವೀರನಾರಾಯಣ, ಬೇಲೂರಿನ ಚೆನ್ನಕೇಶವ, ನಂದಿ ನಾರಾಯಣ ಹಾಗೇಯೇ ರಾಷ್ಟ್ರಕೂಟ ಮತ್ತು ಕಲ್ಯಾಣ ಚಾಲುಕ್ಯರ ಕಾಲದಲ್ಲಿ ನಿರ್ಮಿಸಿದ ಲಕ್ಕುಂಡಿ ಒಂದು ಕಾಲದಲ್ಲಿ ವೈಭವದಿಂದ ಮೆರದಿತ್ತು. ಹಾಗಾಗಿ ಅದು ಅಜರಾಮರವಾಗಿ ಉಳಿಯಬೇಕಿತ್ತು. ಆದರೆ ನಮ್ಮ ಪರಿಸ್ಥಿತಿ, ಮತ್ತು ಮನಸ್ಥಿತಿಗೆ ಅನುಗುಣವಾಗಿ ಎಲ್ಲವೂ ಬದಲಾಯಿಸಿದ್ದೇವೆ. ಇಂದು ನಾವೆಲ್ಲರೂ ಜಾಗೃತರಾಗಿ ಮೂಲ ದೇವಾಲಯ, ವಾಸ್ತುಶಿಲ್ಪವನ್ನು ಉಳಿಸಿಕೊಂಡು ಅದಕ್ಕೆ ಗೌರವ ನೀಡಿ ಉಳಿದವರಿಗೂ ಗೌರವ ಬರುವಂತೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ.
>
> **– ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ಶಿರಹಟ್ಟಿಯ ಎಫ್.ಎಂ. ಡಬಾಲಿ ಪಿ.ಯು.ಕಾಲೇಜಿನ ಉಪನ್ಯಾಸಕರಾದ ಸುಧಾ ಹುಚ್ಚಣ್ಣವರ ಮಾತನಾಡಿ, ದೇಶದ ಅಭಿವೃದ್ಧಿಯನ್ನು ವಿವಿಧ ಆಯಾಮಗಳಲ್ಲಿ ನೋಡುತ್ತಾರೆ. ಅದರಲ್ಲಿ ಪ್ರವಾಸೋದ್ಯಮವು ಅತ್ಯಂತ ಪ್ರಮುಖ ಪಾತ್ರ ಹೊಂದಿದೆ. ಪ್ರವಾಸೋದ್ಯಮದಿಂದ ಮನಸ್ಸಿಗೆ ನೆಮ್ಮದಿ ನೀಡಿ ಜೀವನದಲ್ಲಿ ವಿಶೇಷ ಅನುಭವ ನೀಡುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಪ್ರವಾಸೋದ್ಯಮ ಕುರಿತು ಆಯೋಜಿಸಿದ್ದದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣಪತ್ರ ವಿತರಿಸಲಾಯಿತು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ಶ್ರೀ ವೀರನಾರಾಯಣ ಮತ್ತು ತ್ರಿಕೂಟೇಶ್ವರ ದೇವಸ್ಥಾನ ಸಮಿತಿ ಕಾರ್ಯದರ್ಶಿ ಆನಂದ ಪೊತ್ನೀಸ್, ಬಿ.ಬಿ. ಅಸೂಟಿ, ಕೆಡಿಪಿ ಸಮಿತಿಯ ಸದಸ್ಯ ಎಸ್. ಎನ್. ಬಳ್ಳಾರಿ, ಅಶೋಕ ಮಂದಾಲಿ, ಲಕ್ಕುಂಡಿ ಪ್ರಾಧಿಕಾರದ ಸದಸ್ಯ ಸಿದ್ದು ಪಾಟೀಲ, ಎನ್‌ಎಸ್‌ಎಸ್ ನೋಡಲ್ ಅಧಿಕಾರಿ ವಿ.ಎಸ್. ಕೊಳ್ಳಿ ಸೇರಿದಂತೆ ಗಣ್ಯರು ಹಾಜರಿದ್ದರು.

ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರಾದ ಕೊಟ್ರೇಶ್ವರ ವಿಭೂತಿ ಸ್ವಾಗತಿಸಿದರು, ಉಪನ್ಯಾಸಕ ಬಾಹುಬಲಿ ಜೈನ ಕಾರ್ಯಕ್ರಮ ನಿರ್ವಹಿಸಿದರು.

ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಪ್ರವಾಸೋದ್ಯಮ ದಿನಾಚರಣೆಯ ಮೂಲಕ ಜಗತ್ತಿನಲ್ಲಿ ಪರಸ್ಪರ ಪ್ರೀತಿ-ವಿಶ್ವಾಸದಿಂದ ಇರಬೇಕು ಎಂದು ಸೂಚಿಸಲಾಗುತ್ತಿದೆ. ಪ್ರವಾಸೋದ್ಯಮ ಕ್ಷೇತ್ರಕ್ಕೆ ಹಲವಾರು ರಾಜರು, ಮಠಾಧೀಶರು ಸೇರಿದಂತೆ ಸಾಕಷ್ಟು ಮಹನೀಯರು ಕೊಡುಗೆ ನೀಡಿದ್ದಾರೆ. ನಮ್ಮ ಜಿಲ್ಲೆಯಲ್ಲಿರುವ ಐತಿಹಾಸಿಕ ಸ್ಥಳಗಳಿಗೆ ವಿಶೇಷ ಕಾಳಜಿ ವಹಿಸಿ ಅದನ್ನು ಉಳಿಸಿಕೊಂಡು ನಮ್ಮ ಮುಂದಿನ ಪೀಳಿಗೆಗೆ ಅದರ ಪರಿಚಯ ಮಾಡಬೇಕು ಎಂದು ನುಡಿದರು.

### ಬೆಂಬಲ ಬೆಲೆ ಯೋಜನೆ ಖರೀದಿ ಕೇಂದ್ರ ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ

## ಶೀಘ್ರವೇ ಕೋಲ್ಡ್ ಸ್ಟೋರೇಜ್ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ರೋಣ

ಸರಕಾರ ಘೋಷಣೆ ಮಾಡಿರುವ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಈಗಾಗಲೇ ತಾಲೂಕಿನ ರೈತರು ತಮ್ಮ ಹೆಸರನ್ನು ನೋಂದಾಯಿಸಿದ್ದು, 26 ಸಾವಿರ ಕ್ವಿಂಟಲ್ ಹೆಸರು ಬೆಳೆ ಖರೀದಿ ಪ್ರಕ್ರೀಯೆ ನಡೆಯುತ್ತಿರುವುದು ಸ್ವಾಗತರ್ಹವಾಗಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶುಕ್ರವಾರ ಬೆಂಬಲ ಬೆಲೆ ಯೋಜನೆ ಖರೀದಿ ಕೇಂದ್ರ ಹಾಗೂ ಹಿಂಗಾರು ಬಿತ್ತನೆ ಬೀಜಗಳ ಪೂರೈಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಈ ಹಿಂದೆ ಸಿದ್ದರಾಮಯ್ಯ ನೇತ್ರತ್ವದ ಕಾಂಗ್ರೆಸ್ ಸರಕಾರ ಕೃಷಿ ಭಾಗ್ಯ ಯೋಜನೆಯನ್ನು



ಜಾರಿಗೆ ತರುವ ಮೂಲಕ ನಾಡಿನ ರೈತರಿಗೆ ಅನುಕೂಲ ಕಲ್ಪಿಸಿದ್ದು ಇತಿಹಾಸ ಸೃಷ್ಟಿಸಿದೆ.

ಈಗ ಮತ್ತೆ ಯೋಜನೆಗೆ ಹೊಸ ರೂಪವನ್ನು ಕೊಡಲಾಗಿದೆ. ರೈತರು ಯೋಜನೆಯ ಲಾಭವನ್ನು ಪಡೆದುಕೊಳ್ಳಬೇಕು ಎಂದರು.

ಸರಕಾರ ಸಕಾಲಕ್ಕೆ ರೈತರಿಗೆ ಬಿತ್ತನೆ ಬೀಜವನ್ನು ವಿತರಿಸುವ ಜೊತೆಗೆ ರೈತರ ಹಿತದೃಷ್ಟಿಯಿಂದ ಕಡಲೆ ಬೀಜಕ್ಕೆ 500 ರೂ.ಗಳ ಸಬ್ಸಿಡಿಯನ್ನು ಒದಗಿಸಲಾಗಿದ್ದು, ಓರ್ವ ರೈತನಿಗೆ 5 ಪ್ಯಾಕೆಟ್‌ಗಳವರೆಗೆ ಬಿತ್ತನೆ ಬೀಜಗಳನ್ನು ನೀಡಲಾಗುತ್ತದೆ. ಮುಖ್ಯವಾಗಿ ರೈತರು ಬೀಜೋತ್ಪಾದನೆಯನ್ನೂ ಮಾಡುವ ಮೂಲಕ ಅಧಿಕ ಇಳುವರಿಯನ್ನು ಪಡೆಯಬೇಕು ಎಂದರು.

ತಾಲೂಕಿನ ರೈತರು ಬೆಳೆದ ಬೆಳೆ ರಕ್ಷಣೆ ಸಲುವಾಗಿ ಕೆಲ ದಿನಗಳಲ್ಲಿ ಕೋಲ್ಡ್ ಸ್ಟೋರೇಜ್‌ನ್ನು ನಿರ್ಮಿಸಲು ಮುಂದಾಗಿದ್ದು, ಇದರಿಂದ ತಾಲೂಕಿನ ರೈತರಿಗೆ ಹೆಚ್ಚು ಅನುಕೂಲವಾಗಲಿದೆ. ಅಧಿಕಾರಿಗಳು ಸಹ ರೈತರಿಗೆ ಸಮರ್ಪಕವಾಗಿ ಮಾಹಿತಿಯನ್ನು ನೀಡಬೇಕು. ಅಲ್ಲದೆ ಯಾವ ಬೆಳೆಗೆ ಎಷ್ಟು ಸಬ್ಸಿಡಿ ಸರಕಾರ ಕೊಡುತ್ತದೆ ಎಂಬ ವಿವರವನ್ನು ಸೂಚನಾ ಫಲಕದಲ್ಲಿ ಅಳವಡಿಸಿ ಪ್ರಾಮಾಣಿಕತೆಯನ್ನು ಮೆರೆಯಬೇಕು ಎಂದರು.

ವಿ.ಆರ್. ಗುಡಿಸಾಗರ, ಮುತ್ತಣ್ಣ ಸಂಗಳದ, ಬಸವರಾಜ ಜಗ್ಗಲ, ಶಿವಣ್ಣ ಅರಹುಣಸಿ, ಶಂಕರ ಕಳಗಣ್ಣವರ, ವೆಂಕಣ್ಣ ಬಂಗಾರಿ, ಯೂಸುಫ್ ಇಟಗಿ, ಬಸವರಾಜ ನವಲಗುಂದ, ಪರಶುರಾಮ ಅಳಗವಾಡಿ, ಪ್ರಭು ಮೇಟಿ ಸೇರಿದಂತೆ ಕೃಷಿ ಇಲಾಖೆಯ ಅಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

> ಪಟ್ಟಣದಲ್ಲಿರುವ ವ್ಯಾಪಾರಸ್ಥರು ಎಪಿಎಂಸಿಯಲ್ಲಿ ತಮ್ಮ ವಹಿವಾಟನ್ನು ನಡೆಸಬೇಕು. ಅಂದಾಗ ಪಟ್ಟಣ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಇದರಿಂದ ಇತರೆ ವಹಿವಾಟುಗಳಿಗೂ ಸಹಕಾರಿಯಾಗಲಿದೆ. ಯುವಕರು ವ್ಯಾಪಾರ ನಡೆಸುವ ಪರವಾನಿಗೆ ಪತ್ರ ಹೊಂದಬೇಕು. ಯುವಕರು ವ್ಯಾಪಾರ ನಡೆಸುವುದಕ್ಕೆ ಬಂದರೆ ಎಪಿಎಂಸಿ ಯಾರ್ಡ್‌ನಲ್ಲಿ ಕೊಠಡಿಗಳನ್ನು ನಿರ್ಮಿಸಿಕೊಡಲಾಗುವುದು.
>
> **– ಜಿ.ಎಸ್. ಪಾಟೀಲ.**
> **ಶಾಸಕರು.**

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕೈಮಗ್ಗ, ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ (ಟ್ವಿಸ್ಟಿಂಗ್, ವೈಡಿಂಗ್, ವಾರ್ಪಿಂಗ್ ಹಾಗೂ ಬಣ್ಣ ಹಾಕುವ ಘಟಕಗಳು) ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರು / ಕೆಲಸಗಾರರಿಗೆ "ನೇಕಾರರ ಸಮ್ಮಾನ್ ಯೋಜನೆ" ಯಡಿ 2024-25 ನೇ ಸಾಲಿಗೆ ವಾರ್ಷಿಕ ರೂ., 5,000/- ಆರ್ಥಿಕ ನೆರವನ್ನು ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಮೂಲಕ ನೀಡುವ ಸಲುವಾಗಿ ಸೇವಾಸಿಂದು ಪೋರ್ಟಲ್‌ನಲ್ಲಿ ನೇಕಾರರು / ಕೆಲಸಗಾರರ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಅನುಕೂಲವಾಗುವಂತೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಕೈಮಗ್ಗ, ವಿದ್ಯುತ್ ಮಗ್ಗ ಹಾಗೂ ಮಗ್ಗಪೂರ್ವ (ಟ್ವಿಸ್ಟಿಂಗ್, ವೈಡಿಂಗ್, ವಾರ್ಪಿಂಗ್ ಹಾಗೂ ಬಣ್ಣ ಹಾಕುವ ಘಟಕಗಳು) ಚಟುವಟಿಕೆಗಳಲ್ಲಿ ತೊಡಗಿರುವ ಅರ್ಹ ನೇಕಾರರು / ಕೆಲಸಗಾರರು ನಿಗದಿತ ಅರ್ಜಿಯನ್ನು ಉಪ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ ಜಿ.ಪಂ ಕೊಠಡಿ ಸಂಖ್ಯೆ 206 ಜಿಲ್ಲಾಡಳಿತ ಭವನ ಗದಗ ಈ ಕಚೇರಿಯಿಂದ ಪಡೆದು ಅಕ್ಟೋಬರ್ 25 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಕೈಮಗ್ಗ ಹಾಗೂ ಸಂಬಂದಿಸಿದ ಇತರೆ ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರು ಸಲ್ಲಿಸಬೇಕಾದ ದಾಖಲಾತಿಗಳು-

ನಿಗದಿತ ನಮೂನೆಯಲ್ಲಿ ಅರ್ಜಿ, ಆಧಾರ್ ಕಾರ್ಡ್ ಪ್ರತಿ, ರೇಷನ್ ಕಾರ್ಡ್ ಪ್ರತಿ, ನೇಕಾರರ ಸಮ್ಮಾನ್ ಐ.ಡಿ / ಪೆಹಚಾನ್ ಕಾರ್ಡ್ ಪ್ರತಿ, ಆಧಾರ್ ಲಿಂಕಡ್ ಬ್ಯಾಂಕ್ ಖಾತೆ ಪಾಸ್‌ಬುಕ್ ಪ್ರತಿ, ಕೈಮಗ್ಗ ನೇಕಾರಿಕೆ ವೃತ್ತಿಯಲ್ಲಿ ಇರುವ ಫೋಟೋ, ಕೈಮಗ್ಗದಲ್ಲಿ ಕಾರ್ಯನಿರ್ವಹಿಸುವ ಕೂಲಿ ನೇಕಾರರ ಮಜೂರಿ ಪಾವತಿಯ ರಶೀದಿ

ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ (ಟ್ವಿಸ್ಟಿಂಗ್, ವೈಡಿಂಗ್, ವಾರ್ಪಿಂಗ್ ಹಾಗೂ ಬಣ್ಣ ಹಾಕುವ ಘಟಕಗಳು) ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರು/ಕೆಲಸಗಾರರು ಸಲ್ಲಿಸಬೇಕಾದ ದಾಖಲಾತಿಗಳು -ನಿಗದಿತ ನಮೂನೆಯಲ್ಲಿ ಅರ್ಜಿ, ಆಧಾರ್ ಕಾರ್ಡ್ ಪ್ರತಿ, ರೇಷನ್ ಕಾರ್ಡ್ ಪ್ರತಿ, ನೇಕಾರರ ಸಮ್ಮಾನ್ ಐ.ಡಿ, ಘಟಕದ ಮಾಲೀಕರು / ನೇಕಾರರು / ಕಾರ್ಮಿಕರ ಆಧಾರ್ ಲಿಂಕಡ್ ಬ್ಯಾಂಕ್ ಪಾಸ್ ಬುಕ್ ಪ್ರತಿ, ವಿದ್ಯುತ್ ಮಗ್ಗ / ಮಗ್ಗಪೂರ್ವ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಫಲಾನುಭವಿಯ ಫೋಟೋ, ವಿದ್ಯುತ್ ಸಂಪರ್ಕ ಹೊಂದಿರುವ ಆರ್.ಆರ್ ನಂಬರಿನ ಇತ್ತೀಚಿನ ವಿದ್ಯುತ್ ಬಿಲ್ ಪ್ರತಿ, ಘಟಕದ ಉದ್ಯೋಗ್ ಆಧಾರ್ / ಪಿ.ಎಂ.ಟಿ / ಉದ್ದಿಮೆದಾರರ ಪರವಾನಿಗೆ ಪತ್ರದ ಪ್ರತಿ, ಘಟಕದಲ್ಲಿ ಕಾರ್ಯನಿರ್ವಹಿಸುವ ನೇಕಾರರು / ಕಾರ್ಮಿಕರ ವಿವರಗಳನ್ನು ಒಳಗೊಂಡ ಮಜೂರಿ ಪಾವತಿಯ ಪ್ರತಿ ಮಾಲೀಕರಿಂದ ನೇಕಾರರು / ಕಾರ್ಮಿಕರ ಬಗ್ಗೆ ಧೃಡೀಕರಣ /ಮುಚ್ಚಳಿಕೆ ಪ್ರಮಾಣ ಪತ್ರ .

ಜಿಲ್ಲೆಯ ಕೈಮಗ್ಗ, ವಿದ್ಯುತ್ ಮಗ್ಗ ಹಾಗೂ ಮಗ್ಗ ಪೂರ್ವ ಘಟಕಗಳಲ್ಲಿ ಕೆಲಸ ಮಾಡುವ ಅರ್ಹ ನೇಕಾರರು / ಕೆಲಸಗಾರರು ಹೆಚ್ಚಿನ ಮಾಹಿತಿ / ವಿವರಗಳನ್ನು ಉಪ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ ಜಿ.ಪಂ ಕೊಠಡಿ ಸಂಖ್ಯೆ 206 ಜಿಲ್ಲಾಡಳಿತ ಭವನ ಗದಗ (ದೂರವಾಣಿ-9448859948/ 9740888550/9916582238) ಇಲ್ಲಿಗೆ ಸಂಪರ್ಕಿಸಿ ಪಡೆಯಬಹುದಾಗಿದೆ.



ಗದಗ ಜಿಲ್ಲೆಯ ಲೋಕೋಪಯೋಗಿ ಇಲಾಖೆ ಗದಗ ವಿಭಾಗದಲ್ಲಿ ಲೆಕ್ಕ ಅಧೀಕ್ಷಕರಿಂದ ಲೆಕ್ಕಪರಿಶೋಧನಾಧಿಕಾರಿಗಳಾಗಿ ಪ್ರಕಾಶ ಆರ್.ಮುದಗಲ್ಲ ಇವರು ಪದೋನ್ನತಿ ಹೊಂದಿದ ಪ್ರಯುಕ್ತ ಪ್ರಥಮ ದರ್ಜೆ ಗುತ್ತಿಗೆದಾರ ಎಸ್.ಪಿ. ಮುತ್ತಿನಪೆಂಡಿಮಠ, ಎಫ್.ಎಂ. ಅಣ್ಣಿಗೇರಿ, ಹನುಮಂತ ಮೋನಿ, ಬಾರಕೇರ್ ಸಿಬ್ಬಂದಿಯವರು ಹಾಗೂ ಯುವರಾಜ ಬಳ್ಳಾರಿ ಸನ್ಮಾನಿಸಿ ಶುಭ ಹಾರೈಸಿದರು.

**ಸೆಪ್ಟೆಂಬರ್ 28-ವಿಶ್ವ ರೇಬೀಸ್ ದಿನವನ್ನು ಆಚರಿಸಲಾಗುತ್ತದೆ ; ತನ್ನಿಮಿತ್ತ ವಿಶೇಷ ಲೇಖನ**

# ರೇಬೀಸ್ ಖಾಯಿಲೆ: ವಾಸ್ತವದ ಅರಿವಿರಲಿ

ಕ್ಯಾನ್ಸರ್ ಹಾಗೂ ಇತರ ರೋಗಗಳಿಗೆ ಯಾವುದೇ ಮುನ್ನೆಚ್ಚರಿಕೆ ತೆಗೆದುಕೊಳ್ಳದೇ ಇದ್ದರೆ ಅನೇಕ ರೋಗಗಳಿಗೆ ಆಹ್ವಾನ ನೀಡಿದಂತೆ! ಹಾಗೇಯೇ ರೇಬೀಸ್ ಕೂಡಾ ಇದಕ್ಕೆ ಹೊರತಾಗಿಲ್ಲ. ನಾನು ಹೇಳ ಹೊರಟಿರುವುದು ರೇಬೀಸ್ ಬರದಂತೆ ನೋಡಿಕೊಳ್ಳಬೇಕು, ಕಾಳಜಿ ವಹಿಸಬೇಕು ಎಂದು. ವಿಶ್ವ ರೇಬೀಸ್ ದಿನವನ್ನು ಪ್ರತಿವರ್ಷ ವಿಶ್ವದಾದ್ಯಂತ ಸೆಪ್ಟೆಂಬರ್ 28ರಂದು ಆಚರಿಸಲಾಗುತ್ತದೆ. ಅಂದು ರೇಬೀಸ್ ಖಾಯಿಲೆಗೆ ಮೊಟ್ಟ ಮೊದಲು ಲಸಿಕೆ ಕಂಡು ಹಿಡಿದು,ಅದರ ತಡೆಗಟ್ಟುವಿಕೆಗೆ ಅಡಿಪಾಯ ಹಾಕಿದ ಸರ್ ಲೂಯಿಸ್ ಪಾಶ್ಚರ್ ಮರಣ ಹೊಂದಿದ ದಿನ. ಈ ದಿನದಂದು ರೇಬೀಸ್ ಖಾಯಿಲೆ ಮತ್ತು ಅದರ ತಡೆಗಟ್ಟುವಿಕೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತದೆ.



ವಿಶ್ವ ರೇಬೀಸ್ ದಿನವು ಮಾನವರು ಮತ್ತು ಪ್ರಾಣಿಗಳ ಮೇಲೆ ರೇಬೀಸ್‌ನ ಪ್ರಭಾವದ ಬಗ್ಗೆ ಅರಿವು ಮೂಡಿಸುವ ಗುರಿಯನ್ನು ಹೊಂದಿದೆ. ಅಪಾಯದಲ್ಲಿರುವ ಸಮುದಾಯಗಳಲ್ಲಿ ರೋಗವನ್ನು ತಡೆಗಟ್ಟುವುದು ಹೇಗೆ ಎಂಬುದರ ಕುರಿತು ಮಾಹಿತಿ ಮತ್ತು ಸಲಹೆಯನ್ನು ಒದಗಿಸುತ್ತದೆ.

ವಿಶ್ವ ರೇಬೀಸ್ ದಿನವನ್ನು ಮೊದಲ ಬಾರಿಗೆ ಸೆಪ್ಟೆಂಬರ್ 28, 2007ರಂದು ಆಚರಿಸಲಾಯಿತು. ಗ್ಲೋಬಲ್ ಅಲೈಯನ್ಸ್ ಫಾರ್ ರೇಬೀಸ್ ಕಂಟ್ರೋಲ್, ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ (ಸಿಡಿಸಿ) ಮತ್ತು ವಿಶ್ವ ಆರೋಗ್ಯ ಸಂಘಟನೆಗಳೊಂದಿಗೆ ಮೊದಲ ಬಾರಿಗೆ ರೇಬೀಸ್ ದಿನವನ್ನು ಆಚರಿಸಲಾಯಿತು.

ರೇಬೀಸ್ ಪ್ರಾಣಿಗಳಿಂದ ಮನುಷ್ಯರಿಗೆ ಹರಡಬಹುದಾದ ರೋಗವಾಗಿದೆ. ರೇಬೀಸ್ ವೈರಸ್ ರಾಬ್ಡೋ ವಿರಿಡೇ ವರ್ಗಕ್ಕೆ ಸೇರಿದೆ. ರೇಪಿಡ್ ಎಂದರೆ ಲ್ಯಾಟಿನ್‌ನಲ್ಲಿ ಹುಚ್ಚು ಎಂಬ ಅರ್ಥವಿದೆ. ಇದೇ ಕಾರಣದಿಂದಾಗಿ ಈ ರೋಗಕ್ಕೆ ರೇಬೀಸ್ ಎಂಬ ಹೆಸರು ಬಂದಿದೆ. ಸೋಂಕಿತ ಪ್ರಾಣಿಗಳಲ್ಲಿ ಬೇರೆ ಪ್ರಾಣಿಗಳಿಗೆ ಕಚ್ಚಿದಾಗ ಅಥವಾ ಸೋಂಕಿತ ಪ್ರಾಣಿಗಳ ಜೊಲ್ಲು ಬೇರೊಂದು ಪ್ರಾಣಿಗೆ ಯಾವುದಾದರೂ ರೀತಿ ರವಾನೆಯಾದಾಗ ಈ ಕಾಯಿಲೆ ಹರಡುತ್ತದೆ. ಮನುಷ್ಯನಿಗೆ ಸಾಮಾನ್ಯವಾಗಿ ನಾಯಿಯಿಂದ ಈ ಸೋಂಕು ಹರಡುತ್ತದೆ.

ರೇಬೀಸ್‌ನ ಮೊದಲ ರೋಗಲಕ್ಷಣಗಳು ಫ್ಲೂಗೆ ಹೋಲುತ್ತವೆ. ರೇಬಿಸ್ ವೈರಾಣುವಿನ ಸೋಂಕಿನಿಂದ ಬರುವ ರೇಬಿಸ್ ಮುಖ್ಯವಾಗಿ ಮೆದುಳಿನ ಜೀವಕೋಶಗಳಿಗೆ ಊತವನ್ನುಂಟುಮಾಡಬಹುದು. ಮೊದಲು ಜ್ವರ ಬರಬಹುದು. ಬಳಿಕ ಗಾಯದ ಬಳಿ ಸಂವೇದನೆ, ವಾಕರಿಕೆ, ವಾಂತಿ, ತಳಮಳ, ಆತಂಕ, ಗೊಂದಲ, ಹೈಪರ್ ಆಕ್ಟಿವಿಟಿ, ತಡೆದುಕೊಳ್ಳಲಾಗದ ಉದ್ರೇಕ, ನಿಯಂತ್ರಣವಿಲ್ಲದ ಚಲನವಲನಗಳು, ನೀರಿನ ಭಯ, ದೇಹದ ಭಾಗಗಳ ಮೇಲೆ ನಿಯಂತ್ರಣ ತಪ್ಪುವಿಕೆ, ಪ್ರಜ್ಞೆ ತಪ್ಪುವುದು, ಇವೆಲ್ಲವೂ ರೋಗದ ಲಕ್ಷಣಗಳಾಗಿವೆ.

ಕಾಡು ಪ್ರಾಣಿಗಳು, ಅದೇ ರೀತಿ ಸಾಕು ಪ್ರಾಣಿಗಳು ಕೂಡ ರೇಬೀಸ್ ಹಬ್ಬಿಸುತ್ತವೆ. ಇವುಗಳಲ್ಲಿ ಮುಖ್ಯವಾಗಿ ನಾಯಿ, ಬಾವಲಿ, ಬೆಕ್ಕು, ದನ, ಆಡು, ಕುದುರೆ, ನೀರ್ನಾಯಿಗಳು, ನರಿ, ಮಂಗ ಇತ್ಯಾದಿಗಳು.

ರೇಬೀಸ್ ರೋಗವು ರೇಬೀಸ್ ವೈರಸ್ ಸೋಂಕಿತ ಪ್ರಾಣಿಗಳು, ಮನುಷ್ಯರಿಗೆ ಕಚ್ಚುವುದರಿಂದ ಹರಡುತ್ತದೆ. ಅಪರೂಪದ ಸಂದರ್ಭಗಳಲ್ಲಿ, ಸೋಂಕಿತ ಲಾಲಾರಸವು ತೆರೆದ ಗಾಯ ಅಥವಾ ಬಾಯಿ ಅಥವಾ ಕಣ್ಣುಗಳಂತಹ ಲೋಳೆಯ ಪೊರೆಗಳಿಗೆ ಪ್ರವೇಶಿಸಿದಾಗ ರೇಬೀಸ್ ಹರಡಬಹುದು. ಸುಮಾರು ಶೇಕಡಾ 96ರಷ್ಟು ನಾಯಿ ಕಡಿತವು ಬೀದಿ ನಾಯಿಗಳಿಂದ ಸಂಭವಿಸುತ್ತವೆ.

ರೇಬೀಸ್ ಲೂಯಿಸ್ ಪಾಶ್ಚರ್ ಅವರು ತಮ್ಮ ಸಹೋದ್ಯೋಗಿಗಳ ಸಹಯೋಗದೊಂದಿಗೆ ಮೊದಲ ಪರಿಣಾಮಕಾರಿ ರೇಬೀಸ್ ಲಸಿಕೆಯನ್ನು ಅಭಿವೃದ್ಧಿಪಡಿಸಿದ್ದರು. ಅವರೊಬ್ಬ ಫ್ರೆಂಚ್ ರಾಸಾಯನಿಕ ಶಾಸ್ತ್ರಜ್ಞ ಮತ್ತು ಸೂಕ್ಷ್ಮಜೀವಿ ವಿಜ್ಞಾನ ಶಾಸ್ತ್ರಜ್ಞ. ಅವರು ಕಾಯಿಲೆಗಳ ಕಾರಣ ಮತ್ತು ಅವುಗಳ ಪರಿಹಾರಕ್ಕಾಗಿ ಅವರು ಶ್ರಮಿಸಿರುವುದನ್ನು ಮತ್ತು ಸಂಶೋಧನೆ ಮಾಡಿರುವುದನ್ನು ಯಾವಾಗಲೂ ನೆನೆಯಲಾಗುತ್ತದೆ.

ಅವರ ಸಂಶೋಧನೆಗಳು ಮಗುವಿನ ಮಾರಕ ಜ್ವರದ ಪತ್ತೆಯ ಮೂಲಕ ಚಿಕ್ಕಮಕ್ಕಳ ಸಾವು ಕಡಿಮೆಯಾಗಿದೆ. ಅಲ್ಲದೇ ರೇಬೀಸ್ ರೋಗಕ್ಕೆ ಅವರು ಮೊದಲ ಬಾರಿಗೆ ಲಸಿಕೆಯನ್ನು ಕಂಡುಹಿಡಿದರು. ಅವರ ಪ್ರಯೋಗಗಳಿಂದ ಕ್ರಿಮಿಗಳ ಮೂಲಕ ರೋಗ ಹರಡುವ ವಿಧಾನವನ್ನು ಕಂಡು ಹಿಡಿದರು. ಹಾಲು ಮತ್ತು ವೈನ್ (ಮದ್ಯಸಾರ)ಗಳಿಂದ ಉಂಟಾಗುವ ಸಾವು ನೋವುಗಳನ್ನು ಆತ ಪಾಶ್ಚರೈಸೇಶನ್ ಮೂಲಕ ಕಡಿಮೆ ಮಾಡಿದ ಸೂಕ್ಷ್ಮ ಜೀವಿ ವಿಜ್ಞಾನದ ಸ್ಥಾಪಕರೂ ಹೌದು.



ಒಟ್ಟಾರೆಯಾಗಿ ವಿಶ್ವ ಮಟ್ಟದಲ್ಲಿ ರೇಬಿಸ್ ಕಾಯಿಲೆಗೆ ಚುಚ್ಚುಮದ್ದು ಲಭ್ಯವಿದ್ದರೂ ಜನರು ಇದರ ಬಗ್ಗೆ ನಿರ್ಲಕ್ಷ್ಯ ವಹಿಸುವ ಪರಿಣಾಮವಾಗಿ ರೆಬೀಸ್ ಕಾಯಿಲೆಯು ಮಾರಣಾಂತಿಕವಾಗುತ್ತಿದೆ. ಆದ್ದರಿಂದ

ರೇಬೀಸ್ ಅನ್ನು ನಿರ್ಲಕ್ಷಿಸಬೇಡಿ. ಜಾಗರೂಕರಾಗಿರಿ, ಜಾಗೃತರಾಗಿರಿ.

**- ಬಸವರಾಜ ಎಮ್.ಯರಗುಪ್ಪಿ.**
ಬಿಆರ್‌ಪಿ-ಶಿರಹಟ್ಟಿ, ಲಕ್ಷ್ಮೇಶ್ವರ.

**ಸ್ವಚ್ಛತಾ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿದ ನ್ಯಾ.ಮೂ ಸಿ.ಎಸ್. ಶಿವನಗೌಡರ ಅಭಿಮತ**

# ಸಾರ್ವಜನಿಕರಲ್ಲಿ ಸ್ವಚ್ಛತೆಯ ಅರಿವು ಮೂಡಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ವಕೀಲರ ಸಂಘ, ನಗರಸಭೆ ಗದಗ-ಬೆಟಗೇರಿ ಇವರ ಸಂಯುಕ್ತಾಶ್ರಯದಲ್ಲಿ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮಕ್ಕೆ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡರ ಗುರುವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಾರ್ವಜನಿಕರಿಗೆ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಸ್ವಭಾವದಲ್ಲಿ ಸ್ವಚ್ಛತೆ, ಸಂಸ್ಕಾರ ಸ್ವಚ್ಛತೆ ಎಂಬ ಧ್ಯೇಯ ವಾಕ್ಯದಡಿ ಸ್ವಚ್ಛತಾ ಹೀ ಸೇವಾ ಅಭಿಯಾನವನ್ನು ಅನುಷ್ಠಾನ ಮಾಡಲಾಗುತ್ತಿದೆ. ಅಭಿಯಾನದಲ್ಲಿ ಮೂರು ಅಂಶಗಳಿವೆ. ಸ್ವಚ್ಛತಾ ಕಿ ಭಾಗೇದಾರಿ, ಸಂಪೂರ್ಣ ಸ್ವಚ್ಛತೆ, ಸಫಾಯಿ ಕರ್ಮಚಾರಿಗಳ ಸುರಕ್ಷೆ ಹಾಗೂ ಕ್ಷೇಮಭಿವೃದ್ಧಿ ಕಾರ್ಯಕ್ರಮಗಳಿವೆ ಎಂದರು.

ಸಂಪೂರ್ಣ ಸ್ವಚ್ಛತೆ ಅಭಿಯಾನದಡಿಯಲ್ಲಿ ಮುಖ್ಯ ರಸ್ತೆಗಳ ಸ್ವಚ್ಛತಾ ಕಾರ್ಯವನ್ನು ಜಿಲ್ಲಾಧಿಕಾರಿಗಳ ಕಚೇರಿಯಿಂದ ಪಾಲಾ ಬದಾಮಿ ರಸ್ತೆ ಅಂಬಾಭವಾನಿ ವೃತ್ತದವರೆಗೆ ಸಂಪೂರ್ಣ ಮುಖ್ಯ ರಸ್ತೆಗಳ ಸ್ವಚ್ಛತೆ ಕಾರ್ಯವನ್ನು ಹಮ್ಮಿಕೊಳ್ಳಲಾಗುತ್ತಿದೆ. ಸ್ವಚ್ಛತಾ ಕೀ ಭಾಗೇದಾರಿ ಅಭಿಯಾನದ ಅಡಿಯಲ್ಲಿ ತ್ರಿಕೋಟೇಶ್ವರ ದೇವಸ್ಥಾನ, ಭೀಷ್ಮ ಕೆರೆಯ ದಂಡೆ ಹಾಗೂ ಬೀದಿ ವ್ಯಾಪಾರಸ್ಥರಿಗೆ ಸ್ವಚ್ಛತಾ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.




ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಮ್.ಐ. ಹಿರೇಮನಿಪಾಟೀಲ, ಎಂ.ಬಿ. ಸಂಕದ, ಪೌರಾಯುಕ್ತ ಮಹೇಶ ಪೋತದಾರ, ನಗರಸಭೆ ಪರಿಸರ ಅಭಿಯಂತರ ಆನಂದ ಬದಿ, ಆರೋಗ್ಯ ನಿರೀಕ್ಷಕ ಎಮ್.ಎಮ್. ಮಕಾಂದಾರ, ಬೀದಿ ಬದಿ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಭಾಷಾಸಾಬ ಮಲ್ಲಸಮುದ್ರ, ಬಸವೇಶ್ವರ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಸಫಾಯಿ ಕರ್ಮಚಾರಿಗಳ ಕ್ಷೇಮಾಭಿವೃದ್ಧಿ ಕಾರ್ಯಕ್ರಮದ ಅಡಿಯಲ್ಲಿ ಗದಗ-ಬೆಟಗೇರಿ ನಗರಸಭೆಯ ಪೌರಕಾರ್ಮಿಕರಿಗೆ ಮಾಸ್ಟರ್ ಹೆಲ್ತ್ ಚೆಕಪ್ ಹಾಗೂ ತಂಬಾಕು ಸೇವನೆಯಿಂದ ಆಗುವ ಪರಿಣಾಮಗಳ ಬಗ್ಗೆ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಮೂಲಕ ಸಾರ್ವಜನಿಕರಿಗೆ ಎಲ್ಲೆಂದರಲ್ಲಿ ಕಸ ಎಸೆದಂತೆ ಹಾಗೂ ಸಮರ್ಪಕ ಕಸ ವಿಲೇವಾರಿಗೆ ಸಹಕಾರ ನೀಡುವಂತೆ ಕೋರಲಾಗಿದೆ.

# ಯೋಜನೆಗಳ ಸೌಲಭ್ಯ ಅರ್ಹರಿಗೆ ತಲುಪಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸಫಾಯಿ ಕರ್ಮಚಾರಿಗಳಿಗೆ ಸರ್ಕಾರದಿಂದ ಇರುವ ಸೌಲಭ್ಯ ತಲುಪಿಸುವಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳ ಪಾತ್ರ ಪ್ರಮುಖವಾಗಿದೆ. ಅಧಿಕಾರಿಗಳು ಪ್ರಾಮಾಣಿಕವಾಗಿ ಸಫಾಯಿ ಕರ್ಮಚಾರಿಗಳಿಗೆ ದೊರಕಬೇಕಾದ ವಿವಿಧ ಸೌಲಭ್ಯಗಳನ್ನು ಒದಗಿಸುವಲ್ಲಿ ಕ್ರಮ ವಹಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಸಫಾಯಿ ಕರ್ಮಚಾರಿಗಳ/ಮ್ಯಾನ್ಯುವಲ್ ಸ್ಕ್ಯಾವೆಂಜರ್‌ಗಳ 3ನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಫಾಯಿ ಕರ್ಮಚಾರಿಗಳಿಗೆ ನಿಗದಿತ ಸಮಯಕ್ಕೆ ನಿಗದಿಪಡಿಸಿದ ವೇತನ ಪಾವತಿಸುವುದು ಹಾಗೂ ವಿವಿಧ ಸೌಲಭ್ಯಗಳನ್ನು ದೊರಕಿಸಿ ಕೊಡುವುದು ಅಧಿಕಾರಿಗಳ ಕರ್ತವ್ಯ. ಗುತ್ತಿಗೆ ಸಫಾಯಿ ಕರ್ಮಚಾರಿಗಳಿಗೆ ಗುತ್ತಿಗೆ ಏಜೆನ್ಸಿದಾರರು ಸಮಯಕ್ಕೆ ಸರಿಯಾಗಿ ನಿಗದಿಪಡಿಸಿದ ವೇತನ ಸೌಲಭ್ಯಗಳನ್ನು ವಿತರಿಸುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ವೇತನದೊಂದಿಗೆ ಇ.ಎಸ್.ಐ ಪಿಎಫ್ ಪಾವತಿಸುವ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಇದ್ದಲ್ಲಿ ಮಾತ್ರವೇ ಗುತ್ತಿಗೆದಾರರಿಗೆ ಹಣ ಸಂದಾಯ ಮಾಡಬೇಕು ಎಂದು ಸೂಚಿಸಿದರು.

ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೋತದಾರ ಮಾತನಾಡಿ, 21-12-2023ರಂದು ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್‌ಗಳಲ್ಲಿ ಪೌರಕಾರ್ಮಿಕರಿಗೆ ಸುರಕ್ಷತಾ ಪರಿಕರಗಳ ಬಗ್ಗೆ ಮಾಹಿತಿ ಹಾಗೂ ತರಬೇತಿ ಕಾರ್ಯಾಗಾರವನ್ನು ಜರುಗಿಸಿ, ಅವಶ್ಯಕ ಸುರಕ್ಷತಾ ಪರಿಕರಗಳನ್ನು ವಿತರಿಸಲಾಗಿದೆ. ಪ್ರಸಕ್ತ ವರ್ಷದಲ್ಲಿ ಮತ್ತೊಂದು ಕಾರ್ಯಾಗಾರವನ್ನು ಏರ್ಪಡಿಸಿ ಪೌರ ಕಾರ್ಮಿಕರಲ್ಲಿ ಜಾಗೃತಿ ಮೂಡಿಸಲಾಗುವುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟ್ಟೂರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಿತಿಯ ಸದಸ್ಯರು ಹಾಜರಿದ್ದರು.

# ಜಿಲ್ಲಾ ಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿಗೆ ಸಮೀಪದ ಜಕ್ಕಲಿಯ ಜಿಎಂಪಿಎಸ್ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಸಂಜು ಮಾದರ 400ಮೀ ಓಟದಲ್ಲಿ ತಾಲೂಕಾ ಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿ, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ ಎಂದು ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ. 23ರಂದು ರೋಣದ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ನಡೆದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ತಾಲೂಕು ಮಟ್ಟದ ಸ್ಪರ್ಧೆಗಳಲ್ಲಿ ಸಂಜು ಮಾದರ ಈ ಸಾಧನೆಯನ್ನು ಮಾಡಿದ್ದಾನೆ.

ಜಕ್ಕಲಿ ಎಚ್‌ಪಿಕೆಜಿಎಸ್ ಶಾಲೆಯ ಪೂಜಾ ಕೊಂಡಿ 600ಮೀ. ಓಟದಲ್ಲಿ ತೃತೀಯ ಸ್ಥಾನ ಪಡೆದಿದ್ದಾಳೆ ಎಂದು ಶಾಲೆಯ ಮುಖ್ಯ ಶಿಕ್ಷಕ ಶ್ರೀಕಾಂತ ಗವಿ ತಿಳಿಸಿದ್ದಾರೆ. ಈ ಇಬ್ಬರೂ ವಿದ್ಯಾರ್ಥಿಗಳನ್ನು ಆಯಾ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಮತ್ತು ಶಾಲಾ ಸಿಬ್ಬಂದಿಯವರು ಹೃತ್ಪೂರ್ವಕವಾಗಿ ಅಭಿನಂದಿಸಿ, ಜಿಲ್ಲಾ ಮಟ್ಟದಲ್ಲಿ ಹೆಚ್ಚಿನ ಯಶಸ್ಸನ್ನು ಕೋರಿದ್ದಾರೆ.



# ಯೋಜನೆಗಳ ಸದುಪಯೋಗ ಪಡೆಯಿರಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದ ಗುಣಮಟ್ಟವನ್ನು ಹೆಚ್ಚಿಸಲು ಸರಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತಿದೆ. ನಿಮ್ಮನ್ನು ಅಪೌಷ್ಟಿಕತೆಯಿಂದ ಹೊರತಂದು ನಿಮ್ಮಲ್ಲಿ ಪೌಷ್ಟಿಕತೆಯನ್ನು ಹೆಚ್ಚಿಸುವ ಸಲುವಾಗಿ ಸರಕಾರ ಬಿಸಿಯೂಟದೊಂದಿಗೆ ಮೊಟ್ಟೆ ನೀಡುವ ಯೋಜನೆಯನ್ನು ಜಾರಿಗೊಳಿಸಿದೆ. ಈ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ನೀವುಗಳು ಜಾಣರಾಗಿ ಜೀವನದಲ್ಲಿ ಉನ್ನತಿ ಸಾಧಿಸಬೇಕೆಂದು ಜಕ್ಕಲಿ ಜಿಎಂಪಿಎಸ್ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಸಂಗಯ್ಯ ಪ್ರಭುಸ್ವಾಮಿಮಠ ಹೇಳಿದರು.

ಶಾಲೆಯಲ್ಲಿ ಬುಧವಾರದಿಂದ ಜಾರಿಗೊಳಿಸಲಾದ ವಾರದ ಎಲ್ಲಾ ದಿನ ವಿದ್ಯಾರ್ಥಿಗಳಿಗೆ ಮೊಟ್ಟೆ ವಿತರಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈವರೆಗೆ ಸರಕಾರ ವಾರದ ಎರಡು ದಿನಗಳು ಮಾತ್ರ ಮೊಟ್ಟೆಯನ್ನು ನೀಡುತ್ತಿತ್ತು. ಆದರೆ ಸರಕಾರದೊಂದಿಗೆ ಅಜೀಂ ಪ್ರೇಮ್‌ಜಿ ಫೌಂಡೇಷನ್ ಕೈಗೂಡಿಸಿರುವುದರಿಂದ ವಾರದ ಎಲ್ಲಾ ದಿನ ಮೊಟ್ಟೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಎಸ್‌ಡಿಎಂಸಿ ಅಧ್ಯಕ್ಷೆ ಲಲಿತಾ ಪಾಟೀಲ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷೆ ಗಂಗಮ್ಮ ಜಂಗಣ್ಣವರ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರು, ಎಸ್‌ಡಿಎಂಸಿ ಸದಸ್ಯರು, ಗಣ್ಯರಾದ ದ್ಯಾಮಣ್ಣ ಜಂಗಣ್ಣವರ, ಎಚ್‌ಪಿಕೆಜಿಎಸ್ ಶಾಲೆಯ ಮುಖ್ಯ ಶಿಕ್ಷಕ ಶ್ರೀಕಾಂತ ಗವಿ, ಶಿಕ್ಷಕರಾದ ವಿ.ಎ. ಕುಂಬಾರ, ಎಂ.ವಿ. ತಾಳಿಕೋಟಿ, ಎಸ್.ಎ. ಪಲ್ಲೇದ, ಎ.ಎಂ. ಸೂರಭಟ್ಟನವರ, ಶಿಕ್ಷಕಿಯರಾದ ಎ.ಬಿ. ಜಕ್ಕಲಿ, ವಿ.ಎ. ದಿಂಡೂರ, ಎ.ಪಿ. ಶೆಟ್ಟರ, ಸಿ.ಎಸ್. ಬೆಳ್ಳಟ್ಟಿ, ಪಿ.ಜಿ. ಹುಯಿಲಗೋಳ, ಎಸ್.ಎಸ್. ಯಲ್ಲರೆಡ್ಡಿ ಮುಂತಾದವರಿದ್ದರು.

### ಕೊಣ್ಣೂರಿನ ಪರಮೇಶ್ವರ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಸಚಿವ ಎಚ್.ಕೆ. ಪಾಟೀಲ ಚಾಲನೆ

# ದೇವಸ್ಥಾನ ನಮ್ಮದು ಎಂಬ ಭಾವನೆಯಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೊಣ್ಣೂರಿನ ಪರಮೇಶ್ವರ ದೇವಸ್ಥಾನ ಐತಿಹಾಸಿಕ ಹಿನ್ನೆಲೆ ಹೊಂದಿದೆ. ಇದು 1600 ವರ್ಷಗಳ ಹಿಂದೆ ನಡೆದ ಯುದ್ಧದ ಗೆಲುವಿನ ಸವಿನೆನಪಿಗಾಗಿ ನಿರ್ಮಿಸಲಾದ ದೇವಸ್ಥಾನ. ದೇವಸ್ಥಾನ ಮೂಲ ಆಕೃತಿಗೆ ಧಕ್ಕೆ ಬಾರದಂತೆ, ನಮ್ಮತನವನ್ನು ಉಳಿಸುವ ಸ್ಮಾರಕವಾಗಿ ರೂಪಗೊಳ್ಳಲಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ಜಿಲ್ಲಾಡಳಿತ, ಪ್ರವಾಸೋದ್ಯಮ ಮತ್ತು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರು ಇವರುಗಳ ಸಹಯೋಗದಲ್ಲಿ ರೂ. 150 ಲಕ್ಷಗಳ ವೆಚ್ಚದ ಅನುದಾನದಲ್ಲಿ ಗದಗ ಜಿಲ್ಲೆಯ ನರಗುಂದ ತಾಲೂಕಿನ ಕೊಣ್ಣೂರು ಗ್ರಾಮದಲ್ಲಿರುವ ಶ್ರೀ ಪರಮೇಶ್ವರ ದೇವಾಲಯದ ಸಂರಕ್ಷಣಾ ಕಾಮಗಾರಿಯ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡುತ್ತಿದ್ದರು.

ಇತಿಹಾಸವೇ ಹೇಳುವಂತೆ ಯುದ್ಧದ ವಿಜಯದ ಗೆಲುವಿಗಾಗಿ ನಿರ್ಮಿಸಲಾದ ಪರಮೇಶ್ವರ ದೇವಸ್ಥಾನ ನಮ್ಮೆಲ್ಲರ ಹೆಮ್ಮೆ. ವಿಜಯನಗರ ಅರಸರಿಗೆ



ತೂಕದಾನ ಮಾಡಿದ ಇತಿಹಾಸ ಇಲ್ಲಿದೆ. ಜೀರ್ಣೋದ್ಧಾರದ ವೇಳೆ ಮೂಲ ದೇವಸ್ಥಾನ ಹಾಗೂ ಶಿಲಾಶಾಸನಗಳಿಗೆ ಧಕ್ಕೆಯಾಗದಂತೆ ನಿರ್ಮಿಸಲಾಗುವುದು. ಕೊಣ್ಣೂರಿನ ಗ್ರಾಮಸ್ಥರಿಗೆ ಈ ದೇವಸ್ಥಾನ ನಮ್ಮದು ಎಂಬ ಭಾವನೆ ಬಂದರೆ ಖಂಡಿತವಾಗಿಯೂ ಸುಂದರವಾಗಿ ನಿರ್ಮಾಣವಾಗಲಿದೆ. ಸಾರ್ವಜನಿಕರ ಸಹಕಾರದಿಂದ ಮಾತ್ರವೇ ಜೀರ್ಣೋದ್ಧಾರ ಪೂರ್ಣ ಆಗಲಿದೆ ಎಂದು ನುಡಿದರು. ದೇವಾಲಯದ ಸುತ್ತಮುತ್ತಲಿನ ಗಿಡಗಂಟಿಗಳನ್ನು ತೆರವುಗೊಳಿಸುವುದು, ದೇವಸ್ಥಾನದ ಮೇಲಿನ ಜಲ ನಿರೋಧಕ ಹೊದಿಕೆ ದುರಸ್ತಿಗೊಳಿಸುವುದು, ದೇವಾಲಯದ ಶಿಥಿಲ ಕಲ್ಲುಗಳನ್ನು ತೆಗೆದು ಹೊಸದಾಗಿ ಹಾಕಲಾಗುವುದು. ಹಳೆ ಹಾಗೂ ಹೊಸ ಕಲ್ಲು ಜೋಡಿಸಿ ಮರು ನಿರ್ಮಾಣ ಕೈಗೊಳ್ಳುವುದು, ವಿಮಾನ ಗೋಪುರ ನಿರ್ಮಾಣ, ನೆಲಹಾಸು ಸೇರಿದಂತೆ ಸುತ್ತಲೂ ಚೈನ್ ಲಿಂಕ್ ಮಾಡಲಾಗುವುದು. ದೇವಸ್ಥಾನದ ಇತಿಹಾಸ-ಶಾಸನಗಳ ಜೊತೆಗೆ ಕನ್ನಡ ಫಲಕ ಹಾಕಲಾಗುವುದು ಎಂದು ಸಚಿವ ಎಚ್.ಕೆ. ಪಾಟೀಲ ಜೀರ್ಣೋದ್ಧಾರ ಕಾಮಗಾರಿಗಳನ್ನು ವಿವರಿಸಿದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ನರಗುಂದ ವಿಧಾನಸಭಾ ಕ್ಷೇತ್ರದಲ್ಲಿ ಈ ತಿಂಗಳು 2 ದೊಡ್ಡ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಲಕ್ಕುಂಡಿ ದೇವಸ್ಥಾನಗಳ ಅಭಿವೃದ್ಧಿಗಾಗಿ 5 ಕೋಟಿ ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಜೊತೆಗೆ ಇಂದು ಕೊಣ್ಣೂರಿನ ಪರಮೇಶ್ವರ ದೇವಸ್ಥಾನದ ಅಭಿವೃದ್ಧಿಗೆ 1.50 ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಕೈಗೊಳ್ಳಲಾಗಿದೆ. ಇದಕ್ಕೆ ಕಾರಣರಾದ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರಿಗೆ ಅಭಿನಂದನೆಗಳು ಎಂದರು.ದೇವಸ್ಥಾನದ ಅಭಿವೃದ್ಧಿಯ ಮೂಲಕ ಈ ಗ್ರಾಮದ ಸಾರ್ವಜನಿಕರಲ್ಲಿ ಸಹಭಾಗಿತ್ವ ಸೌಹಾರ್ದಯುತ ವಾತಾವರಣ ಇನ್ನಷ್ಟು ಬಲಗೊಳ್ಳಲಿ ಎಂದು ಆಶಿಸಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ವಿರಕ್ತಮಠದ ಶಿವಕುಮಾರ ಶ್ರೀಗಳು ಹಾಗೂ ಡಾ. ಶಿವಾನಂದ ಶ್ರೀಗಳು, ಬೈರನಹಟ್ಟಿ ಶ್ರೀಗಳು, ಕಲ್ಮಠದ ಸಿದ್ದಲಿಂಗ ಶ್ರೀಗಳು ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷೆ ಸಿದ್ದವ್ವ ಬಸವರಾಜ್ ಕಳಸಣ್ಣನವರ್, ರಾಜೂಗೌಡ ಕೆಂಚನಗೌಡ್ರ, ಶೇಖರಗೌಡ, ನಿಂಗಪ್ಪ ವಜ್ರಂಗಿ, ಜಕ್ಕಪ್ಪನವರ, ಬಾಬುಗೌಡ್ರ, ಸೋಮಾಪೂರ ಸೇರಿದಂತೆ ಇತರರು ಇದ್ದರು.

ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಭಾಗದ ಬೆಣ್ಣೆಹಳ್ಳ ಪ್ರವಾಹ ನಿರ್ಬಂಧಿಸುವುದು ಹಾಗೂ ಬೆಣ್ಣೆಹಳ್ಳ ಆಳ ಹೆಚ್ಚಿಸುವ ಕಾಮಗಾರಿಗೆ 200 ಕೋಟಿ ರೂ.ಗಳ ಯೋಜನೆಗೆ ಅನುಮೋದನೆ ನೀಡಲಾಗಿದೆ. ಈ ಮೂಲಕ ಬೆಣ್ಣೆ ಹಳ್ಳ ಪ್ರದೇಶದ ವ್ಯಾಪ್ತಿಯ ರೈತರಿಗೆ ಸಹಕಾರಿಯಾಗಲಿದೆ. ಬೆಣ್ಣೆ ಹಳ್ಳದ ನೀರನ್ನು ಸಮರ್ಪಕವಾಗಿ ಬಳಕೆ ಮಾಡಲು ಸರ್ಕಾರ ಮುಂದಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.




## ಜನಪ್ರತಿನಿಧಿಗಳ ಮಾರ್ಗದರ್ಶನದಲ್ಲಿ ಕೆಲಸ ನಿರ್ವಹಿಸಿ

▶▶ ಮೊದಲನೇ ಪುಟದಿಂದ

ಮನೆ ಮನೆಗಳಿಗೆ ನಲ್ಲಿ ಮೂಲಕ ನೀರು ಸರಬರಾಜು ಮಾಡುವ ಜೆ.ಜೆ.ಎಂ. ಯೋಜನೆಯಡಿ ಸಮರ್ಪಕ ನಿರ್ವಹಣೆಗೆ ಕ್ರಮ ವಹಿಸಬೇಕು. ನೀರು ವ್ಯರ್ಥಾ ಪೋಲಾಗದಂತೆ ಕ್ರಮ ವಹಿಸಬೇಕು. ಜಿಲ್ಲೆಯಲ್ಲಿ ಇಂದಿರಾ ಕ್ಯಾಂಟೀನ್ ನಿರ್ವಹಣೆ ಸಮರ್ಪಕವಾಗಿ ಆಗಬೇಕು ಎಂದರು.

ಸರ್ಕಾರ ವಿವಿಧ ಇಲಾಖೆಗಳ ಸ್ಥಿರಾಸ್ತಿ ಸಂರಕ್ಷಣೆ ಜವಾಬ್ದಾರಿಯು ಸಂಬಂಧಿತ ಅಧಿಕಾರಿಯದ್ದಾಗಿರುತ್ತದೆ. ಅಧಿಕಾರಿಗಳು ಈ ನಿಟ್ಟಿನಲ್ಲಿ ನಿರ್ಲಕ್ಷ್ಯ ತೋರಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಜಿಲ್ಲೆಯಲ್ಲಿ ಪದವಿಪೂರ್ವ ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಯ ಕಡೆ ಹೆಚ್ಚು ಗಮನ ಹರಿಸಬೇಕು. ಜಿಲ್ಲೆಯು ಉನ್ನತ ಸ್ಥಾನದಲ್ಲಿ ಬರಲು ಕ್ರಿಯಾ ಯೋಜನೆ ರೂಪಿಸಬೇಕು. ಇತ್ತೀಚೆಗೆ ಸುರಿದ ಮಳೆಯಿಂದ ಬೆಟಗೇರಿಯ ಟರ್ನಲ್ ಪೇಟೆಯಲ್ಲಿನ ರಸ್ತೆಯಲ್ಲಿನ ಮನೆಗಳಿಗೆ ನೀರು ನುಗ್ಗಿ ತೊಂದರೆಯಾಗಿದೆ. ನಗರಸಭೆಯವರು ಈ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಂಡು ಮಳೆ ನೀರು ಗಟಾರುಗಳಲ್ಲಿ ಸರಾಗವಾಗಿ ಹರಿದು ಹೋಗುವಂತೆ ಕ್ರಮ ವಹಿಸಬೇಕು ಎಂದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ರೈತರಿಗೆ ವಿತರಿಸಲಾಗುವ ರಸಗೊಬ್ಬರದ ಗುಣಮಟ್ಟದ ಪರೀಕ್ಷೆ ನಡೆಸಬೇಕು. ಅರ್ಹ ಫಲಾನುಭವಿಗಳಿಗೆ ಕೃಷಿ ಯಂತ್ರೋಪಕರಣಗಳ ವಿತರಣೆ ಮಾಡುವಾಗ ವಿನಾಕಾರಣ ವಿಳಂಬ ಮಾಡಬಾರದು ಎಂದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಜಿಲ್ಲೆಯಲ್ಲಿ ಇಂದಿರಾ ಕ್ಯಾಂಟೀನ್ ನಿರ್ವಹಣೆ ಸಮರ್ಪಕ ರೀತಿಯಲ್ಲಿ ಆಗಬೇಕು. ಕುಡಿಯುವ ನೀರಿನ ಸಮಸ್ಯೆಯಿರುವ ಪ್ರದೇಶಗಳಲ್ಲಿ ಬೋರ್‌ವೆಲ್‌ಗಳ ಮೂಲಕ ನೀರು ಸರಬರಾಜಿಗೆ ಕ್ರಮ ವಹಿಸಬೇಕು. ಹಮ್ಮಿಗಿಯಲ್ಲಿ ನೀರು ಪೂರೈಕೆಯ ಪೈಪ್‌ಲೈನ್ ದುರಸ್ತಿಯಿದ್ದು, ರಿಪೇರಿಗಾಗಿ ವಿವರವಾದ ಪ್ರೊಜೆಕ್ಟ್ ತಯಾರು ಮಾಡಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಮಾತನಾಡಿ, ಜಿಲ್ಲೆಯಲ್ಲಿ ಸೆಪ್ಟೆಂಬರ್ 25ರವರೆಗೆ ವಾಡಿಕೆ ಮಳೆ 467 ಮಿ.ಮೀ ಇದ್ದು, ವಾಸ್ತವ ಮಳೆ 424 ಮಿ.ಮೀ ಆಗಿರುತ್ತದೆ. 311771 ಹೆಕ್ಟೇರ್ ಪ್ರದೇಶ ಬಿತ್ತನೆಯಾಗಿದೆ. ರೈತರಿಗೆ ವಿತರಣೆಗೆ 12504 ಮೆಟ್ರಿಕ್ ಟನ್ ರಸಗೊಬ್ಬರದ ಲಭ್ಯತೆ ಇದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ತೋಟಗಾರಿಕೆ, ಶಿಕ್ಷಣ, ಜೆಜೆಎಮ್, ಹೆಸ್ಕಾಮ್ ಸೇರಿದಂತೆ ವಿವಿಧ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಲಾಯಿತು. ಸಭೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿಲ್ಲಾ ಗ್ಯಾರಂಟಿ ಯೋಜನೆಯ ಸಮಿತಿ ಅಧ್ಯಕ್ಷ ಬಿ.ಬಿ.ಅಸೂಟಿ, ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಮಿತಿ ಸಭೆಯ ಅಧಿಕಾರೇತರ ಸದಸ್ಯರಾದ ಎಸ್.ಎನ್. ಬಳ್ಳಾರಿ, ಪ್ರಭು ಮೇಟಿ, ಎಸ್.ಡಿ. ಮಕಾನದಾರ, ಶಾರದಾ ಹಿರೇಗೌಡರ, ತಹಸೀಲ್ದಾರರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ರೋಟರಿ ಕ್ಲಬ್‌ನಿಂದ ಯಶಸ್ವಿ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರ

# 9 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆ

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ವೆಲ್‌ಫೇರ್ ಸೊಸೈಟಿ, ರೋಟರಿ ಕ್ಲಬ್ ಗದಗ-ಬೆಟಗೇರಿ ಇವುಗಳ ಸಂಯುಕ್ತಾಶ್ರಯದಲ್ಲಿ ಜರುಗಿದ 195ನೇ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ 9 ಜನರಿಗೆ ಯಶಸ್ವಿಯಾಗಿ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ನೆರವೇರಿಸಲಾಯಿತು.

ಕಣ್ಣಿನಲ್ಲಿ ಮಸೂರ ಅಳವಡಿಸುವ ಈ ಶಸ್ತ್ರ ಚಿಕಿತ್ಸೆಯನ್ನು ದಿ. ಶ್ರೀಮತಿ ತುಕ್ಕುಬಾಯಿ ನಾರಾಯಣಸಾ ಖಟವಟೆ (ಗುಂಜಿನವರು) ಇವರ ಸ್ಮರಣಾರ್ಥ ವಿಶ್ವನಾಥ ಎನ್. ಖಟವಟೆ (ಗುಂಜಿನವರು) ಮತ್ತು ಮಕ್ಕಳು ಪ್ರಾಯೋಜತ್ವವನ್ನು ವಹಿಸಿದ್ದರು. ಸುಮಾರು 34 ಜನ ರೋಗಿಗಳನ್ನು ತಪಾಸಣೆ ಮಾಡಿ ಶಸ್ತ್ರ ಚಿಕಿತ್ಸೆಗೆ ಯೋಗ್ಯರಾದ 9 ಜನರಿಗೆ ನೇತ್ರ ಶಸ್ತ್ರ ಚಿಕಿತ್ಸೆಯುನ್ನು ಕೈಗೊಂಡರು.

ರೋಟರಿ ಸಂಸ್ಥೆಯ ಅಧ್ಯಕ್ಷರಾದ ರೊ. ಡಾ. ಆರ್.ಬಿ.



ಉಪ್ಪಿನ, ಕಾರ್ಯದರ್ಶಿ ರೊ. ಸಂತೋಷ ಅಕ್ಕಿ, ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಎಸ್. ಹೊಸಳ್ಳಿಮಠ, ರೊ. ಹೆಚ್.ಎಸ್. ಪಾಟೀಲ, ಲಕ್ಷ್ಮೀ ವಿಶ್ವನಾಥ ಖಟವಟೆ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ರೋಟರಿ ಸಂಸ್ಥೆ ವೆಲ್ ಫೇರ್ ಸೊಸಾಯಿಟಿಯ ಕಾರ್ಯದರ್ಶಿ ರೊ. ಬಾಲಕೃಷ್ಣ ಕಾಮತ್, ರೋಟರಿ ಸಂಸ್ಥೆಯ ಕಾರ್ಯದರ್ಶಿ ರೊ. ಸಂತೋಷ ಅಕ್ಕಿ ಸದಸ್ಯರಾದ ರೊ. ಡಾ. ಪ್ರದೀಪ ಉಗಲಾಟ, ರೊ. ವೀಣಾ ತಿರ್ಲಾಪೂರ, ರೊ. ಅಕ್ಷಯ ವ್ಹಿ ಶೆಟ್ಟಿ, ರೊ. ಚನ್ನವೀರ ಹುಣಸಿಕಟ್ಟಿ, ರೊ.ಮಹೇಶ ಹಿಂಡಿ, ರೊ.ವಿಶ್ವನಾಥ ಯಳಮಲಿ ಮುಂತಾದವರು ಉಪಸ್ಥಿತರಿದ್ದರು.

ಈ ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ ರುದ್ರೇಶ, ನೇತ್ರಾ, ಮಲ್ಲಪ್ಪ ಕುಂಬಾರ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಸಿಂಗ್ರಿ ನೇತ್ರ ಶಸ್ತ್ರ ಚಿಕಿತ್ಸೆ ನಡೆಸಲು ಸಹಾಯ ಮಾಡಿದರು.

ಶಸ್ತ್ರ ಚಿಕಿತ್ಸೆಯ ನಂತರ ನಡೆದ ಕಾರ್ಯಕ್ರಮದಲ್ಲಿ ವಿಶ್ವನಾಥ ಎನ್.ಖಟವಟೆಯವರು ಮಾತನಾಡುತ್ತಾ, ರೋಟರಿ ಸಂಸ್ಥೆಯು ನಿರಂತರವಾಗಿ ಕೈಗೊಳ್ಳುತ್ತಿರುವ ಕಣ್ಣಿನ ಶಸ್ತ್ರ ಚಿಕಿತ್ಸೆಯನ್ನು ಪ್ರಾಯೋಜಿಸಲು ತಮಗೆ ಅವಕಾಶ ನೀಡಿದ್ದಕ್ಕಾಗಿ ಧನ್ಯವಾದಗಳನ್ನು ಅರ್ಪಿಸಿದರು.

## ಡಾ. ಅಂಬೇಡ್ಕರ್ ಪುತ್ಥಳಿ ನಿರ್ಮಿಸಲು ಮನವಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಜೋಡು ರಸ್ತೆಯಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಸಂವಿಧಾನಶಿಲ್ಪಿ ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಿಸಲು ಪುರಸಭೆ ಮುಂದಾಗಬೇಕು ಎಂದು ಒತ್ತಾಯಿಸಿ ಶುಕ್ರವಾರ ಕ್ರಾಂತಿಸೂರ್ಯ ಜೈಭೀಮ್ ಸೇನೆ ಪದಾಧಿಕಾರಿಗಳು ಮುಖ್ಯಾಧಿಕಾರಿಗೆ ಮನವಿ ನೀಡಿದರು.

ಸಂಘಟನೆಯ ಮುಖಂಡ ಪ್ರಕಾಶ ರಾಠೋಡ ಮಾತನಾಡಿ, ಪಟ್ಟಣದ ಜೋಡು ರಸ್ತೆಯಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ ಅವರ ಹೆಸರಿನಲ್ಲಿ ವೃತ್ತ ನಿರ್ಮಿಸಲಾಗಿದೆ. ಆದರೆ, ಡಾ. ಅಂಬೇಡ್ಕರ್ ಅವರ ಪುತ್ಥಳಿಯನ್ನು ವೃತ್ತದಲ್ಲಿ ಪುರಸಭೆ ಇನ್ನೂ ನಿರ್ಮಿಸಿಲ್ಲ. ಹೀಗಾಗಿ ಪುರಸಭೆ ವತಿಯಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕಲ್ಯಾಣ ಯೋಜನೆ, ಪ್ರಸ್ತುತ ಸಾಲಿನ ಎಸ್‌ಎಫ್‌ಸಿ ಹಾಗೂ ಪುರಸಭೆ ನಿಧಿ ಬಳಸಿಕೊಂಡು ಅಂಬೇಡ್ಕರ್ ಅವರ ವೃತ್ತದಲ್ಲಿ ಮಹಾನಾಯಕ ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಾಣಕ್ಕೆ ಮುಂದಾಗಬೇಕು ಎಂದರು.

ಈ ವೇಳೆ ಕನಕಪ್ಪ ಕಲ್ಲೊಡ್ಡರ, ರವಿ ನಿಡಗುಂದಿ, ಅಮಿತ ಭಜಂತ್ರಿ, ರಮೇಶ ತಳವಾರ, ದುರಗಪ್ಪ ಪೂಜಾರ, ಮಾರುತಿ ಬಂಕದ, ಶುಭಂ ಮಾರನಾಳ, ಕಿರಣ ವಡ್ಡರ, ಮಾರುತಿ ವಡ್ಡರ ಮುಂತಾದವರಿದ್ದರು.



## ಸಿಎಂ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ

■ ವಿಜಯಸಾಕ್ಷಿ ಸುದ್ದಿ, ಗದಗ



ಸಿಬಿಐ ಸ್ವಯಂಪ್ರೇರಿತ ತನಿಖೆ ನಡೆಸಬಹುದೆಂಬ ಅಧಿಕಾರವನ್ನು ರದ್ದು ಮಾಡುವ ಸಂಪುಟದ ನಿರ್ಣಯದ ಮೂಲಕ ಕರ್ನಾಟಕದ ಕಾಂಗ್ರೆಸ್ ಸರಕಾರವು ಸಂವಿಧಾನ ವಿರೋಧಿಯಾಗಿ ವರ್ತಿಸಿದೆ ಎಂದು ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಮುಡಾ, ವಾಲ್ಮೀಕಿ ನಿಗಮದ ಹಗರಣ ಸೇರಿ ಹಗರಣಗಳಿಂದಲೇ ಕೂಡಿದ ಸಿದ್ದರಾಮಯ್ಯನವರ ಸರಕಾರವು ಭಯಾತಂಕದಿಂದ ಈ ನಿರ್ಧಾರ ಮಾಡಿದಂತಿದೆ. ದೇಶದ ಒಕ್ಕೂಟ ವ್ಯವಸ್ಥೆಗೆ ಭಂಗ ತರುತ್ತಿದ್ದಾರೆ.

ಮಾಜಿ ಸಿಎಂ ಯಡಿಯೂರಪ್ಪ ಅವರ ಮೇಲೆ ಆರೋಪ ಬಂದಾಗ ಸಿದ್ದರಾಮಯ್ಯನವರು ವಿಪಕ್ಷ ನಾಯಕರಾಗಿ ಕೂಡಲೇ ಯಡಿಯೂರಪ್ಪನವರು ಅವರು ರಾಜೀನಾಮೆ ಕೊಡಬೇಕು, ನಿಷ್ಪಕ್ಷಪಾತ ತನಿಖೆಗೆ ಸಹಕರಿಸಲಿ ಎಂಬರ್ಥದ ಮಾತನಾಡಿದ್ದರು. ಈಗ ಸಿದ್ದರಾಮಯ್ಯನವರು ಪಕ್ಷಪಾತದ ತನಿಖೆ ಬಯಸುತ್ತಿರುವ ಕಾರಣ ಬಯಸಿ ರಾಜೀನಾಮೆ ಕೊಡುತ್ತಿಲ್ಲವೇ? ಜೊತೆಗೆ ಸಿಬಿಐ ತನಿಖೆ ನಡೆದರೆ ಇನ್ನಷ್ಟು ಹಗರಣ ಹೊರಬರುವ ಆತಂಕ ಅವರನ್ನು ಕಾಡುತ್ತಿದೆಯೇ ಎಂದು ಪ್ರಶ್ನಿಸಿದ್ದಾರಲ್ಲದೆ, ಸಿದ್ದರಾಮಯ್ಯನವರ ರಾಜೀನಾಮೆಗೆ ಆಗ್ರಹಿಸಿದ್ದಾರೆ.

### ಮೂಲ ಸೌಕರ್ಯದ ಕೊರತೆ ಎದುರಿಸುತ್ತಿರುವ ಮಾಗಡಿ ಗ್ರಾಮ

# ಅಪೂರ್ಣ ಕೆಲಸಗಳಿಗಿಲ್ಲ ಮುಕ್ತಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ವಿದೇಶಿ ವಲಸೆ ಪಕ್ಷಿಗಳ ತಾಣವಾಗಿರುವ ಮಾಗಡಿ ಗ್ರಾಮವು ಗ್ರಾಮ ಪಂಚಾಯಿತಿಯ ಕೇಂದ್ರಸ್ಥಾನವಾಗಿ ಗುರುತಿಸಿಕೊಂಡಿದೆ. ಹಲವು ಬಾರಿ ಗಾಂಧಿಗ್ರಾಮ ಪುರಸ್ಕಾರಕ್ಕೂ ಈ ಪಂಚಾಯಿತಿ ಭಾಜನವಾಗಿದೆ. ಆದಾಗ್ಯೂ ಗ್ರಾಮ ಇನ್ನೂ ಹೆಚ್ಚಿನ ರೀತಿಯಲ್ಲಿ ಸಮರ್ಪಕ ರಸ್ತೆ, ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯದ ಕೊರತೆಯನ್ನು ಎದುರಿಸುತ್ತಿದೆ.

**ಗ್ರಾ.ಪಂ ಕೇಂದ್ರಸ್ಥಾನ:** ಮಾಗಡಿ ಗ್ರಾಮವು ಗ್ರಾಮ ಪಂಚಾಯಿತಿಯ ಕೇಂದ್ರಸ್ಥಾನವಾಗಿದ್ದು, ಮಾಗಡಿ, ಹೊಳಲಾಪೂರ, ಪರಸಾಪೂರ ಮತ್ತು ಚನ್ನಪಟ್ಟಣ ಗ್ರಾಮಗಳ ವ್ಯಾಪ್ತಿಯನ್ನು ಹೊಂದಿದೆ. ಸುಮಾರು 6969 ಜನಸಂಖ್ಯೆಯನ್ನು ಹೊಂದಿದ್ದು, 16 ಜನ ಸದಸ್ಯರ ಸಂಖ್ಯಾಬಲವನ್ನು ಹೊಂದಿದೆ.

**ನರೇಗಾದಲ್ಲಿ 9 ಮನೆಗಳ ನಿರ್ಮಾಣ:** ಗ್ರಾ.ಪಂ ವತಿಯಿಂದ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ 9 ಮನೆಗಳ ನಿರ್ಮಾಣ ಹೊರತುಪಡಿಸಿದರೆ ಉಳಿದಂತೆ ಯಾವ ಕೆಲಸಗಳೂ ನಡೆಯುತ್ತಿಲ್ಲ. ಮಳೆಗಾಲವಿದ್ದುದರಿಂದ ಕೂಲಿ ಕಾರ್ಮಿಕರು ತಮ್ಮ ಜಮೀನುಗಳ ಕೆಲಸದಲ್ಲಿ ತೊಡಗಿರುತ್ತಾರೆ. ವಾರ್ಷಿಕ 25.80 ಲಕ್ಷ ರೂ ತೆರಿಗೆ ಸಂಗ್ರಹಣೆಯಲ್ಲಿ ಈಗಾಗಲೇ 5.60 ಲಕ್ಷ ರೂ ತೆರಿಗೆ ವಸೂಲಿ ಮಾಡಲಾಗಿದೆ ಎಂದು



ಪಂಚಾಯಿತಿ ಅಧಿಕಾರಿಗಳು ಹೇಳುತ್ತಿದ್ದಾರೆ.

ನರೇಗಾ ಯೋಜನೆಯು ಸಮರ್ಪಕವಾಗಿ ನಡೆಯಬೇಕು, ಕೂಲಿಕಾರ್ಮಿಕರಿಗೆ ಸಮರ್ಪಕವಾಗಿ ಕೂಲಿ ಕೆಲಸ ಸಿಗಬೇಕು, ಅವರ ವೇತನ ಸರಿಯಾಗಿ ಪಾವತಿಯಾಗಬೇಕೆಂದು ಸ್ವತಃ ಜಿ.ಪಂ ಸಿಇಓ ಭರತ್ ಎಸ್ ಅವರೇ ಗ್ರಾ.ಪಂ ಮಟ್ಟದಲ್ಲಿ ಭೇಟಿ ನೀಡಿ ಯೋಜನೆಯ ನಿರ್ವಹಣೆ ಪರಿಶೀಲಿಸುತ್ತಿದ್ದಾರೆ. ಆದರೆ ತಾಲೂಕಾ ಮಟ್ಟದಲ್ಲಿ ನರೇಗಾ ಯೋಜನೆಯಡಿ ಜಾಗೃತಿ ಮೂಡಿಸಬೇಕಾದ ಸಿಬ್ಬಂದಿಗಳು ಕಾಟಾಚಾರಕ್ಕೆಂಬಂತೆ ಗ್ರಾ.ಪಂ ವತಿಯಿಂದ ನಡೆಯುತ್ತಿರುವ ಕೆಲಸಗಳಲ್ಲಿ ಸೇರಿದ ಕೂಲಿಕಾರ್ಮಿಕರು ಇರುವ ಸ್ಥಳಕ್ಕೆ ಧಾವಿಸಿ ಜಾಗೃತಿ ಮೂಡಿಸುತ್ತಿರುವುದು ವಿಪರ್ಯಾಸ. ಇಂತಹ ಸಿಬ್ಬಂದಿಗಳಿಗೆ ಸಿಇಓ ಅವರು ಸೂಕ್ತ ನಿರ್ದೇಶನ ನೀಡಿ ಗ್ರಾಮ ಮಟ್ಟದಲ್ಲೂ ಸಹ ಈ ಬಗ್ಗೆ ವ್ಯಾಪಕ ಜಾಗೃತಿ ಆಗಬೇಕೆಂದು ಮಾಗಡಿ ಗ್ರಾ.ಪಂ ಸದಸ್ಯರು ಆಗ್ರಹಿಸುತ್ತಿದ್ದಾರೆ.

**ಜಲಜೀವನ ಮಿಷನ್ ಅಪೂರ್ಣ:** ಮಾಗಡಿ ಗ್ರಾಮದಲ್ಲಿ ಜಲಜೀವನ ಮಿಷನ್ ಯೋಜನೆಯಡಿ ಮನೆ ಮನೆಗೆ ನೀರು ಸರಬರಾಜು ಮಾಡುವ ಯೋಜನೆ ಅಪೂರ್ಣಗೊಂಡಿದ್ದು, 2 ಶುದ್ಧ ನೀರಿನ ಘಟಕಗಳು ಕಾರ್ಯಾರಂಭ ಮಾಡುತ್ತಿವೆ. ಡಿಬಿಓಟಿಯಿಂದ ನಿತ್ಯವೂ ಜನತೆಗೆ ನೀರು ಪೂರೈಕೆಯಾಗುತ್ತಿದೆ. ಗ್ರಾ.ಪಂ ವತಿಯಿಂದ ಘನತ್ಯಾಜ್ಯ ವಿಲೇವಾರಿ ಘಟಕ ಹೊಂದಿದೆ. ಇಲ್ಲಿ ಕಸವನ್ನು ಸಂಗ್ರಹಿಸುವುದಕ್ಕಾಗಿ ಮನೆ ಮನೆಗೆ ಗ್ರಾ.ಪಂ ವಾಹನ ತೆರಳಿದರೂ ಜನತೆ ಸಮರ್ಪಕವಾಗಿ ಕಸ ವಿಲೇವಾರಿ ಮಾಡುತ್ತಿಲ್ಲವೆಂದು ಪಂಚಾಯಿತಿಯ ಸಿಬ್ಬಂದಿಗಳು ಹೇಳುತ್ತಿದ್ದಾರೆ.

ಮಾಗಡಿ ಕೆರೆ ಸುತ್ತಲೂ ಗಬ್ಬೆದ್ದು ನಾರುವ ದುರ್ವಾಸನೆ: ವಿದೇಶಿ ವಲಸೆ ಪಕ್ಷಿಗಳ ತಾಣವಾಗಿರುವ ಮಾಗಡಿ ಸಂರಕ್ಷಿತ ಕೆರೆಯ ಸುತ್ತಲೂ ಎಲ್ಲೆಂದರಲ್ಲಿ ಕಸದ ರಾಶಿ ರಾರಾಜಿಸುತ್ತಿದ್ದು, ರಸ್ತೆಯಲ್ಲಿ ಸಂಚರಿಸುವವರು ಮೂಗು ಮುಚ್ಚಿಕೊಂಡು ಹೋಗುವಂತಹ ದುರ್ವಾಸನೆ ಬೀರುತ್ತಿದೆ.

ಈ ಕುರಿತು ಪ್ರತಿಕ್ರಿಯಿಸಿದ ಮಾಗಡಿ ಗ್ರಾ.ಪಂ ಸದಸ್ಯ ಹಾಗೂ ತಾಲೂಕಾ ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ, ಗ್ರಾಮದಲ್ಲಿ ಜೆಜೆಎಂ ಕೆಲಸ ಅಪೂರ್ಣಗೊಂಡಿದೆ, ಸಿಸಿ ರಸ್ತೆ, ಸಿಸಿ ಗಟಾರಗಳ ನಿರ್ಮಾಣಕ್ಕೆ ಅನುದಾನದ ಅವಶ್ಯಕತೆ ಇದೆ. ನರೇಗಾ ಯೋಜನೆ ಬಗ್ಗೆ ಜಾಗೃತಿ ಮೂಡಿಸುವ ಸಿಬ್ಬಂದಿಗಳು ಸಮರ್ಪಕವಾಗಿ ಕೆಲಸ ಮಾಡಬೇಕು ಎಂದರು.


ಗ್ರಾಮ ಪಂಚಾಯತ ಕಾರ್ಯಾಲಯ, ಚಿಕ್ಕಹಂದಿಗೋಳ

ತಾಲೂಕ :- ಗದಗ ಜಿಲ್ಲಾ:- ಗದಗ

ಸಂ.ಗ್ರಾ.ಪಂ.ಚಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25

ದಿ:- 12/09/2024

**-: ದರಪಟ್ಟಿ ಪ್ರಕಟಣೆ :-**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಚಿಕ್ಕಹಂದಿಗೋಳ ಇವರು 2024- 25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಶ್ಯಾಗೋಟಿ ಗ್ರಾಮದ ಜನತಾ ಪ್ಲಾಟಿನಲ್ಲಿರುವ ಹಂದ್ರಾಳವರ ಮನೆಯಿಂದ ಸಂಗನಗೌಡ ಪಾಟೀಲವರ ಮನೆವರೆಗೆ ಸಿ.ಸಿ. ರಸ್ತೆ ನಿರ್ಮಾಣ. | 191124 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು. |
| 2 | ಶ್ಯಾಗೋಟಿ ಗ್ರಾಮದ ಸರಕಾರಿ ಪ್ರೌಢ ಶಾಲೆಗೆ ಕಂಪೌಂಡ ನಿರ್ಮಿಸುವುದು. | 292509 | 500 | |
| 3 | ಶ್ಯಾಗೋಟಿ ಗ್ರಾಮದ ಯಲ್ಲವ್ವ ತಮ್ಮನಗೌಡ್ರು ಮನೆಯಿಂದ ಬಸನಗೌಡ ವೆಂಕನಗೌಡ್ರು ಮನೆವರೆಗೆ ಸಿ.ಸಿ. ರಸ್ತೆ ನಿರ್ಮಾಣ. | 91407 | 500 | |
| 4 | ಶ್ಯಾಗೋಟಿ ಗ್ರಾಮದ ಸರಕಾರಿ ಪ್ರೌಢ ಶಾಲೆಗೆ ಬಾಲಕರಿಗೆ ಶೌಚಾಲಯ ನಿರ್ಮಾಣ. | 128359 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ: 18/09/2024 ರಿಂದ 30/09/2024 ರವರೆಗೆ ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 01-10-2024 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: 01-10-2024 ರ ಮಧ್ಯಾಹ್ನ 3.00 ಗಂಟೆ

**ನಿಬಂಧನೆಗಳು :**

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಚಿಕ್ಕಹಂದಿಗೋಳದ ಮಾಹಿತಿ ಪಡೆಯಬಹುದಾಗಿದೆ.

ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಚಿಕ್ಕಹಂದಿಗೋಳ

ಸಹಿ/- ಅಧ್ಯಕ್ಷರು, ಗ್ರಾಮ ಪಂಚಾಯತಿ ಚಿಕ್ಕಹಂದಿಗೋಳ

**ಹಾವೇರಿ-ಗದಗ ಜಿಲ್ಲೆಗಳ ವ್ಯಾಪ್ತಿಯ ರೈಲ್ವೆ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಂಸದ ಬಸವರಾಜ ಬೊಮ್ಮಾಯಿ**

# ವಂದೇ ಭಾರತ್ ರೈಲು ನಿಲುಗಡೆಗೆ ಕ್ರಮವಹಿಸಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರೈಲ್ವೆ ಕಾಮಗಾರಿಗಳ ನಿರ್ಮಾಣ ಹಾಗೂ ಪ್ರಗತಿ ಪರಿಶೀಲನಾ ಸಭೆಯನ್ನು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿರವರು ನಡೆಸಿ ಹಾವೇರಿಯಲ್ಲಿ ವಂದೇ ಭಾರತ್ ರೈಲು ನಿಲುಗಡೆಗೆ ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಶುಕ್ರವಾರ ಹುಬ್ಬಳ್ಳಿಯ ಗದಗ ರಸ್ತೆಯಲ್ಲಿರುವ ರೈಲ್ ಸೌಧದಲ್ಲಿ ನಡೆದ ಸಭೆಯಲ್ಲಿ ಗದಗ-ಹಾವೇರಿ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ, ಚಾಲನೆಯಲ್ಲಿರುವ ರೈಲ್ವೆ ಯೋಜನೆಗಳ ಪ್ರಗತಿ ಹಾಗೂ ನೂತನ ರೈಲು ಮಾರ್ಗ ಆರಂಭಿಸಲು ತ್ವರಿತಗತಿಯಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದರು. ಗದಗ ಜಿಲ್ಲಾ ವ್ಯಾಪ್ತಿಯ ಗದಗ-ಹೊಂಬಳ ರಸ್ತೆಯಲ್ಲಿರುವ ರೇಲ್ವೆ ಸೇತುವೆ, ಗದಗ-ಯಲವಿಗಿ ನೂತನ ರೇಲ್ವೆ ಮಾರ್ಗ, ಮುಂಡರಗಿ ತಾಲೂಕಿನ ಹಳ್ಳಿಕೇರಿ ಹತ್ತಿರ ಕೆಳ ಸೇತುವೆ ನಿರ್ಮಾಣ, ಗದಗ-ಗಜೇಂದ್ರಗಡ-ವಾಡಿ ಮಾರ್ಗ ಕಾಮಗಾರಿ, ಗದಗ-ಬೆಟಗೇರಿ ನಡುವೆ ಬಳ್ಳಾರಿ ಗೇಟ್ ಕೆಳಭಾಗದ ಸೇತುವೆ ದುರಸ್ತಿ, ಗದಗ-ನವಲಗುಂದ-ನರಗುಂದ ರೇಲ್ವೆ ಕಾಮಗಾರಿಗೆ ನಕ್ಷೆ ತಯಾರಿಸಿ ಅನುಮೋದಿಸುವುದು, ಕಣವಿ ಗ್ರಾಮದ ಹುಲಕೋಟಿ ಯಲವಿಗಿ ಹೊಸ ರೈಲುಗಳ ಸರ್ವೇ ಮಾಡಲಾಗಿದೆ. ಈ ಸ್ಥಳ ಬದಲಾವಣೆ ಕುರಿತು ಸಾರ್ವಜನಿಕರಿಂದ ಮನವಿ ಬಂದಿದ್ದು, ಈ ಕುರಿತು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಗದಗ ಪಟ್ಟಣದ ಗಂಗಾಪುರ ಪೇಟೆಯ ಗೇಟ್ ನಂ.2ಎಗೆ ಮೇಲು ಸೇತುವೆ ಕಾಮಗಾರಿ ಪೂರ್ಣಗೊಳಿಸುವುದು, ಗದಗ-ಶಿರಹಟ್ಟಿ ಯಲವಿಗಿ ರೇಲ್ವೆ ಮಾರ್ಗ ಕಾಮಗಾರಿ ಭೂ ಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸುವುದು, ಗದಗ-ಹರಪನಹಳ್ಳಿ ನೂತನ ರೈಲು ಮಾರ್ಗ ಅನುಷ್ಠಾನಗೊಳಿಸಲು ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಹಾವೇರಿ ಜಿಲ್ಲೆ ವ್ಯಾಪ್ತಿಯಲ್ಲಿ ಬರುವ ರೈಲು ಮಾರ್ಗಗಳಲ್ಲಿ ಯಲವಿಗಿ-ಹಾವೇರಿ-ಬ್ಯಾಡಗಿ ರಾಣೆಬೆನ್ನೂರ ಚಳಗೇರಿ ರೇಲ್ವೆ ಸ್ಟೇಷನ್ ನವೀಕರಣ, ಲಕ್ಷ್ಮೇಶ್ವರ-ಸವಣೂರ ನಡುವೆ ಯಲವಿಗಿ ಹತ್ತಿರದ ರೇಲ್ವೆ ಸೇತುವೆ, ರಾಣೆಬೆನ್ನೂರ-ಶಿಕಾರಿಪುರ ನೂತನ ರೇಲ್ವೆ ಮಾರ್ಗ ಭೂ ಸ್ವಾಧೀನ ಮಾಡುವುದು, ರಾಣೆಬೆನ್ನೂರ ತಾಲೂಕಿನ ಕೋನಬೇವು-ಶಿಡಗನಾಳ ನಡುವೆ ರೇಲ್ವೆ ಸೇತುವೆ ನಿರ್ಮಾಣ, ಸವಣೂರ ತಾಲೂಕಿನ ಯಲವಿಗಿ ಗ್ರಾಮದ ಹತ್ತಿರ ಸಧ್ಯದ ಕೆಳ ಸೇತುವೆ ಬದಲಾಗಿ ಮೇಲ್ಸೇತುವೆ ನಿರ್ಮಾಣ ಮಾಡಲು ಸೂಚಿಸಿದರು.

ಜನ ಶತಾಬ್ದಿ, ಕಿತ್ತೂರ ರಾಣಿ ಚನ್ನಮ್ಮ, ಯಶವಂತಪುರ-ವಾಸ್ಕೋ ಎಕ್ಸ್‌ಪ್ರೆಸ್, ಮಂಗಳೂರು- ವಿಜಯಪುರ ಎಕ್ಸ್‌ಪ್ರೆಸ್ ರೈಲನ್ನು ಯಲವಿಗಿ ಸ್ಟೇಷನ್‌ನಲ್ಲಿ ನಿಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದರು.

ಈ ಸಂದರ್ಭದಲ್ಲಿ ನೈರುತ್ಯ ರೇಲ್ವೆ ಇಲಾಖೆಯ ಜನರಲ್ ಮ್ಯಾನೇಜರ್ ಅರವಿಂದ ಶ್ರೀ ವಾಸ್ತವ್ ಸೇರಿದಂತೆ ಇಲಾಖೆಯ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

**ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ**

# ಜಿಲ್ಲೆಯಾದ್ಯಂತ 38 ಪರೀಕ್ಷಾ ಕೇಂದ್ರಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಾದ್ಯಂತ ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆ 38 ಪರೀಕ್ಷಾ ಕೇಂದ್ರಗಳಲ್ಲಿ ಸೆಪ್ಟೆಂಬರ್ 29 ರಂದು ಬೆಳಿಗ್ಗೆ 10.30 ಯಿಂದ ಮಧ್ಯಾಹ್ನ 12.30 ರವರೆಗೆ ಜರುಗಲಿವೆ. ಪರೀಕ್ಷೆಯನ್ನು ಪಾರದರ್ಶಕವಾಗಿ ಯಾವುದೇ ಅವ್ಯವಹಾರಗಳಿಗೆ ಆಸ್ಪದ ನೀಡದೇ ಸುವ್ಯವಸ್ಥಿತವಾಗಿ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದ್ದಾರೆ.

ಪರೀಕ್ಷೆ ಕೇಂದ್ರಗಳ ವಿವರ : ಗದಗ ನಗರದಲ್ಲಿರುವ ಕೆ.ಎಲ್.ಇ ಸೊಸೈಟಿಯ ಜಗದ್ಗುರು ತೋಂಟದಾರ್ಯ ಪಿ ಯು ಕಾಲೇಜ್, ಹೆಚ್.ಸಿ.ಇ.ಎಸ್ ಪದವಿಪೂರ್ವ ಕಾಲೇಜ್, ವಿ.ಡಿ.ಎಸ್.ಟಿ ಹೆಣ್ಣುಮಕ್ಕಳ ಸಂಯುಕ್ತ ಪಿ.ಯು.ಕಾಲೇಜ್, ಕೆ.ವಿ.ಎಸ್ ಆರ್ ಸಂಯುಕ್ತ ಪದವಿ ಪೂರ್ವ ಕಾಲೇಜ್, ತೋಂಟದ ಸಿದ್ದೇಶ್ವರ ಪಿ.ಯು ಪದವಿಪೂರ್ವ ಕಾಲೇಜ್, ಜಗದ್ಗುರು ತೋಂಟದಾರ್ಯ ಇಂಗ್ಲೀಷ್ ಮಿಡಿಯಂ ಹೈಸ್ಕೂಲ್, ಸಿ.ಎಸ್.ಪಾಟೀಲ ಬಾಲಕಿಯರ ಪ್ರೌಢಶಾಲೆ, ಸಿ.ಎಸ್.ಪಾಟೀಲ ಬಾಲಕರ ಪ್ರೌಢಶಾಲೆ, ಎ.ಎಸ್. ಎಸ್ ಕಾಮರ್ಸ್ ಕಾಲೇಜ್, ರೋಟರಿ ಸೆಂಟ್ರಲ್ ಸ್ಕೂಲ್, ಸೇಂಟ್ ಜಾನ್ ಹೈಸ್ಕೂಲ್, ಲೊಯೊಲಾ ಹೈಸ್ಕೂಲ್, ಬೆಟಗೇರಿ-ಗದಗ, ಬಿಪಿನ್ ಚಿಕ್ಕಟ್ಟಿ ಪಿ.ಯು ಸೈನ್ಸ್ ಕಾಲೇಜ್, ಬ್ರೈಟ್ ಹಾರಿಜೋನ್ ಇಂಗ್ಲೀಷ್ ಮಿಡಿಯಂ ಸ್ಕೂಲ್, ಸನ್ಮಾರ್ಗ ಪಿಯು ಕಾಲೇಜ್, ಜಿ ಡಿ ಶಾ ಇಂಗ್ಲಿಷ್ ಮಿಡಿಯಂ ಹೈಸ್ಕೂಲ್, ಸಿ.ಡಿ.ಓ ಜೈನ್ ಅಂಗ್ಲ ಮಾಧ್ಯಮ ಶಾಲೆ, ಮೈಲಾರಪ್ಪ ಮೆಣಸಗಿ ಸಂಯುಕ್ತ ಪದವಿ ಪೂರ್ವ ಕಾಲೇಜ್, ಬಸವೇಶ್ವರ ಪ್ರೌಢ ಶಾಲೆ, ಜೆ.ಸಿ. ಹೈಸ್ಕೂಲ್, ಮಹಾವೀರ ಜೈನ್ ಇಂಗ್ಲೀಷ್ ಮಿಡಿಯಂ ಪ್ರೌಢಶಾಲೆ, ಕರ್ನಾಟಕ ಪದವಿ ಪೂರ್ವ ಕಾಲೇಜ್, ಸರ್ಕಾರಿ ಪದವಿ ಪೂರ್ವ ಕಾಲೇಜ್,

ಗಜೇಂದ್ರಗಡದ ಸರ್ಕಾರಿ ಪದವಿ ಪೂರ್ವ ಕಾಲೇಜ್, ಎಸ್.ಎಂ.ಭೂಮರಡ್ಡಿ ಪದವಿ ಪೂರ್ವ ಕಾಲೇಜ್,

ಲಕ್ಷೇಶ್ವರದ ಬಿ.ಸಿ.ಎನ್. ಪದವಿ ಪೂರ್ವ ಕಾಲೇಜ್, ಸರ್ಕಾರಿ ಪದವಿ ಪೂರ್ವ ಕಾಲೇಜ್, ಪಿ.ಎಸ್.ಬಿ.ಡಿ ಬಾಲಕಿಯರ ಪ್ರೌಢ ಶಾಲೆ,

ಮುಂಡರಗಿಯ ಜೆ.ಎ ಪದವಿ ಪೂರ್ವ ಕಾಲೇಜ್, ಸರ್ಕಾರಿ ಪದವಿ ಪೂರ್ವ ಕಾಲೇಜ್, ಎಂ ಎಸ್ ಡಂಬಳ ಮಹಿಳಾ ಪದವಿ ಪೂರ್ವ ಕಾಲೇಜ್,

ನರಗುಂದದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜ್, ಲಯನ್ಸ್ ಪದವಿ ಪೂರ್ವ ಕಾಲೇಜ್, ನವೋದಯ ಪ್ರೌಢ ಶಾಲೆ,

ರೋಣದಲ್ಲಿರುವ ಕಿತ್ತೂರು ಚನ್ನಮ್ಮಾ ಪದವಿ ಪೂರ್ವ ಕಾಲೇಜ್, ನ್ಯೂ ಲಿಟಲ್ ಫ್ಲಾವರ್ ಪದವಿ ಪೂರ್ವ ಕಾಲೇಜ್,

ಶಿರಹಟ್ಟಿಯ ಎಫ್.ಎಂ ಡಬಾಲಿ ಪದವಿ ಪೂರ್ವ ಕಾಲೇಜ್, ಸರ್ಕಾರಿ ಪದವಿ ಪೂರ್ವ ಕಾಲೇಜ್,

**ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆ ಆವರಣದಲ್ಲಿ ಹೈಮಾಸ್ಟ್ ದೀಪಕ್ಕೆ ಚಾಲನೆ**

# ಬಡ ವಿದ್ಯಾರ್ಥಿಗಳ ಪಾಲಿಗೆ ವರದಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ದಿನಮಾನಗಳಲ್ಲಿ ಬಡ ವಿದ್ಯಾರ್ಥಿಗಳಿಗೆ ಉತ್ಕೃಷ್ಟಮಟ್ಟದ ಶಿಕ್ಷಣ ಸಿಗದೇ ಇರುವದು ನೋವಿನ ಸಂಗತಿಯಾಗಿದೆ. ಆದರೆ ಖಾಸಗಿ ಶಾಲೆಗಳಿಗೆ ಸೆಡ್ಡು ಹೊಡೆದ ಸಿದ್ಧಲಿಂಗನಗರದ ಸರಕಾರಿ ಪ್ರೌಢಶಾಲೆ ಉತ್ಕೃಷ್ಟ ಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಬಡ ವಿದ್ಯಾರ್ಥಿಗಳ ಪಾಲಿಗೆ ವರದಾನವಾಗಿದೆ ಎಂದು ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ ಅಭಿಪ್ರಾಯಪಟ್ಟರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸಿದ್ದಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯ ಶಾಲಾ ಆವರಣದಲ್ಲಿ ನಗರಸಭೆ ಅನುದಾನದ ಅಡಿಯಲ್ಲಿ ಅಳವಡಿಸಿದ ಹೈಮಾಸ್ಟ್ ದೀಪವನ್ನು ಸಾಂಕೇತಿಕವಾಗಿ ಲೋಕಾರ್ಪಣೆಗೊಳಿಸುವ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಗದಗ ಶಹರದ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಂ. ಅಗಡಿ ಸೇರಿದಂತೆ ಅಧ್ಯಕ್ಷತೆ ವಹಿಸಿದ್ದ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿಯವರು ಮಾತನಾಡಿದರು.

ಈ ಸಂದರ್ಭದಲ್ಲಿ ಸಾಮಾಜಿಕ ಕಾರ್ಯಕರ್ತ ಅಮರೇಶ ಗಡಗಿ, ತೋಟಗಾರಿಕೆ ಇಲಾಖೆ ಅಧಿಕಾರಿ ಶಂಭುಲಿಂಗ ನೆಗಳೂರ, ಸುನೀಲ ವೆರ್ಣೇಕರ್, ಸಂತೋಷ ಪಾಟೀಲ, ಮಲ್ಲಪ್ಪ ಜಿನಗಿ, ಮೈಲಾರಪ್ಪ ಹುಯಿಲಗೋಳ, ಮಂಜುನಾಥ ಹುಡೇದ, ರೇಖಾ ಬಾವಿ, ಮಾರುತಿ ಚಲವಾದಿ, ರೇಣುಕಾ ರೋಣದ, ಶಿವಶಿಂಪರ, ಬಾಕಳೆ, ಶಿಕ್ಷಕರಾದ ಸುಭಾಸ ನಿಡಸನೂರ, ಎ.ಎಮ್. ಸಂಗನಾಳ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲಾ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್. ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್. ಆರ್. ಶಿರೋಳ್, ಸಬಿಯಾ ಯು. ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಮುಂತಾದವರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಸಂಜೀವಿನಿ ಕೂಲಗುಡಿ ನೆರವೇರಿಸಿದರು. ವಂದನಾರ್ಪಣೆಯನ್ನು ಶಶಿಕಲಾ ಬಿ.ಗುಳೇದವರ ಮಾಡಿದರು.



ಶಾಲೆಯ ದತ್ತು ಉಸ್ತುವಾರಿಗಳಾದ ಡಾ.ಬಸವರಾಜ ಧಾರವಾಡ ಮಾತನಾಡಿ, ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಮೇಲೆ ಈ ಶಾಲೆಯಲ್ಲಿ ಹಲವಾರು ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಡಲಾಗಿದೆ. ಶೀಘ್ರದಲ್ಲಿಯೇ ಬೃಹತ್ ಕಾರ್ಯಕ್ರಮ ಆಯೋಜಿಸಿ ಪೂರ್ಣಗೊಂಡ ಎಲ್ಲ ಕಾಮಗಾರಿಗಳನ್ನು ಲೋಕಾರ್ಪಣೆಗೊಳಿಸಲಾಗುವುದು ಎಂದು ಹೇಳಿದರು.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

**ಪ್ರಕಟಣೆ**

ಸಂ: ನಪ್ರಾಗಬೆ/ಭೂಬ/2024-25/819 ದಿನಾಂಕ:27-9-2024

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ಮಲ್ಲಿಕಾರ್ಜುನ ಬಸಪ್ಪ ದೊಡ್ಡಮನಿ ಇವರು ಸಾ॥ ಗದಗ ಈ ಕೆಳಕಂಡ ಜಮೀನುಗಳನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69(3) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1 | ನರಸಾಪೂರ | 154/*/4 | 01ಎಕರೆ-20ಗುಂಟೆ | ಸಾರ್ವಜನಿಕ/ ಅರೇಸಾರ್ವಜನಿಕ | ವಸತಿ |

ವಾ.ಸಾ.ಇ/ಗದಗ/259/ದೇಶಪಾಂಡೆಪಬ್ಲಿಸಿಟಿ/2024-25

ಸಹಿ/- ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ



ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ವಾಸನ ತಾ ॥ ನರಗುಂದ 582206 ಜಿ ॥ ಗದಗ**
**E-Mail : vasan.nar.gdg@gmail.com Phone: 08377-246356**

ಸಂ.ಗ್ರಾ.ಪಂ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25/1 ದಿನಾಂಕ:-24/09/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ವಾಸನ ಇವರು 2024-25ನೇ ಸಾಲಿನ ಮಹಾತ್ಮ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ಸಾಮಗ್ರಿ ಪೂರೈಕೆದಾರರಿಂದ ಕಾಮಗಾರಿವಾರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಕಛೇರಿ ಅವಧಿಯಲ್ಲಿ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಅಂದಾಜು ಮೊತ್ತ | ಸಾಮಗ್ರಿ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|---|
| 01 | ವಾಸನ ಗ್ರಾಮದ ಸರಕಾರಿ RMS ಪ್ರೌಢ ಶಾಲೆಯ ಶೌಚಾಲಯ ನಿರ್ಮಾಣ. | 200000 | 148369 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿ-ಯಿಂದ ಪಡೆದು ಸಲ್ಲಿಸುವುದು |
| 02 | ವಾಸನ ಗ್ರಾಮದ ಸರಕಾರಿ RMS ಪ್ರೌಢ ಶಾಲೆಯ ಮೈದಾನ ಅಭಿವೃದ್ಧಿಪಡಿಸುವುದು. | 500000 | 336590 | 1000 | |
| 03 | ವಾಸನ ಗ್ರಾಮದ ANM ಸೆಂಟರನಿಂದ ನಡಮನಿ ಬಾಪು ಮನೆಯವರೆಗೆ ಗಟಾರ ನಿರ್ಮಾಣ. | 350000 | 233145 | 1000 | |
| 04 | ವಾಸನ ಗ್ರಾಮದ ಅಶೋಕ ತೆಗ್ಗಿನಮನಿ ಇವರ ಮನೆಯಿಂದ ಮುಖ್ಯ ರಸ್ತೆವರೆಗೆ ರಸ್ತೆ ನಿರ್ಮಾಣ | 350000 | 271129 | 1000 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ವಿತರಿಸುವ ದಿನಾಂಕ : **28/09/2024** ರಿಂದ **13/10/2024** ರ ಒಳಗಾಗಿ ಗ್ರಾಮ ಪಂಚಾಯತ ಕಾರ್ಯಾಲಯದ ಕಛೇರಿ ಸಮಯದಲ್ಲಿ ಪಡೆದು ದಿನಾಂಕ : **28-09-2024** ರಿಂದ **13-10-2024** ರೊಳಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಪ್ರತ್ಯೇಕವಾಗಿ ಕಾಮಗಾರಿವಾರು ಗ್ರಾಮ ಪಂಚಾಯತಿ ಕಚೇರಿಗೆ ಸಲ್ಲಿಸುವುದು. ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಮೇಲ್ಕಂಡ ದಿನಾಂಕದೊಳಗೆ ಗ್ರಾಮ ಪಂಚಾಯತ ಕಾರ್ಯಾಲಯ ವಾಸನದಲ್ಲಿ ಮಾಹಿತಿ ಪಡೆಯಬಹುದಾಗಿದೆ.

ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ, ವಾಸನ

ವಾಸಾಸಂಇ/ಗದಗ/ಕೆಎಸ್ಎಂಸಿಎ/247/2024-25

ಸಹಿ/- ಅಧ್ಯಕ್ಷರು, ಗ್ರಾಮ ಪಂಚಾಯತಿ, ವಾಸನ


## ಮುಡಾ ಪ್ರಕರಣ ಎಫ್‌ಐಆರ್ ದಾಖಲು

■ ವಿಜಯಸಾಕ್ಷಿ ಸುದ್ದಿ, ಮೈಸೂರು

ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನಿರ್ದೇಶನದಂತೆ ಮೈಸೂರು ಲೋಕಾಯುಕ್ತದಲ್ಲಿ ಎಫ್‌ಐಆರ್ ದಾಖಲು ಮಾಡಲಾಗಿದೆ.

ಕೇಸ್ ನಂಬರ್ 11/2024 ಅಡಿ ಎಫ್‌ಐಆರ್ ದಾಖಲಾಗಿದ್ದು, ಲೋಕಾಯುಕ್ತ ಅಧಿಕಾರಿಗಳು ಎಫ್‌ಐಆರ್‌ನಲ್ಲಿ ಅಧಿಕೃತವಾಗಿ ನಮೂದು ಮಾಡಿದ್ದಾರೆ. ಸಿಎಂ ಸಿದ್ದರಾಮಯ್ಯ 01, 02 ಆಗಿ ಸಿಎಂ ಪತ್ನಿ ಪಾರ್ವತಿ, 03 ಸಿಎಂ ಸಿದ್ದರಾಮಯ್ಯರ ಬಾಮೈದ ಮಲ್ಲಿಕಾರ್ಜುನ್ ಸ್ವಾಮಿ ಹಾಗೂ ಭೂಮಿ ಮಾರಾಟ ಮಾಡಿದ ದೇವರಾಜು 04 ಆರೋಪಿಯಾಗಿದ್ದಾರೆ. ಕೋರ್ಟ್ ನಿರ್ದೇಶನದಂತೆ ಮೈಸೂರು ಲೋಕಾಯುಕ್ತ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ.


ಕರ್ನಾಟಕ ಮೃಗಾಲಯ ಪ್ರಾಧಿಕಾರ

**ಕಾರ್ಯನಿರ್ವಾಹಕ ನಿರ್ದೇಶಕರು ಗದಗ ಮೃಗಾಲಯ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಗದಗ ವಿಭಾಗ, ಗದಗ**

ದೂರವಾಣಿ/ಫ್ಯಾಕ್ಸ : 08372-200289 ಇ-ಮೇಲ್ : dyconservatorgadag@gmail.com

ನಂ.ಎ3/ಝುಡ್ಎಕೆ/ಆಸಾಪೂ/ಹೊರಗುತ್ತಿಗೆ ಸಿಬ್ಬಂದಿ/ಟೆಂಡರ/2024-25. ದಿನಾಂಕ : 25-09-2024

**ಇ-ಟೆಂಡರ್ ಪ್ರಕಟಣೆ**

ಗದಗ ಮೃಗಾಲಯಕ್ಕೆ 2024-25 ನೇ ಸಾಲಿಗೆ (ದಿನಾಂಕ : **01-10-2024** ರಿಂದ **31-03-2025** ರವರೆಗೆ) ಗದಗ ಮೃಗಾಲಯಕ್ಕೆ ಹೊರಗುತ್ತಿಗೆ ಆಧಾರದ ಮೇರೆಗೆ ಕಛೇರಿಗೆ ಕೆಲಸಗಳಿಗೆ ಡಾಟಾ ಎಂಟ್ರಿ ಆಪರೇಟರ್ ಮತ್ತು 'ಡಿ'-ಗ್ರೂಪ್ ಸಿಬ್ಬಂದಿ ಪೂರೈಕೆ, ಮೃಗಾಲಯದ ಪ್ರಾಣಿ-ಪಕ್ಷಿಗಳಿಗೆ ಸಸ್ಯಾಹಾರ ಹಾಗೂ ಮಾಂಸಾಹಾರ ಸಾಮಗ್ರಿಗಳನ್ನು ಸರಬರಾಜು ಮಾಡಲು, ಕರ್ನಾಟಕ ಮೃಗಾಲಯ ಪ್ರಾಧಿಕಾರದ ನಿಯಮಾವಳಿ ಪ್ರಕಾರ ಕಾರ್ಯನಿರ್ವಾಹಕ ನಿರ್ದೇಶಕರು ಗದಗ ಮೃಗಾಲಯ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು, ಗದಗ ವಿಭಾಗ, ಗದಗ ಇವರಲ್ಲಿ ನೋಂದಾಯಿತ ಗುತ್ತಿಗೆದಾರರಾಗಿ ಹೆಸರನ್ನು ನೋಂದಾಯಿಸಿಕೊಂಡಿರುವ ಅರ್ಹ ಗುತ್ತಿಗೆದಾರರು ಮಾತ್ರ ಹಾಗೂ ಕರ್ನಾಟಕ ಸರ್ಕಾರ ಸಂಗ್ರಹಣೆಗಳ ಪೋರ್ಟಲ್‌ನಲ್ಲಿ ನೋಂದಾಯಿಸಿದ ಗುತ್ತಿಗೆದಾರರಿಂದ ಕರ್ನಾಟಕ ಸರ್ಕಾರದ **https://kppp.karnataka.gov.in** ಇ-ಪೋರ್ಟಲ್ ಮೂಲಕ ಇ-ಟೆಂಡರಗಳನ್ನು ಆಹ್ವಾನಿಸಲಾಗಿದೆ.

| ಯುನಿಟ್ ನಂ./ಕ್ರ.ಸಂ. | ಇಂಡೆಂಟ್ ನಂ. | ವಿವರ | ಅಂದಾಜು ಮೊತ್ತ ರೂ.ಗಳಲ್ಲಿ | ಇ.ಎಂ.ಡಿ.ಮೊತ್ತ ರೂ.ಗಳಲ್ಲಿ (2.5%) |
|---|---|---|---|---|
| 1 | | ಸಸ್ಯಾಹಾರ ಆಹಾರ ಪದಾರ್ಥಗಳು.(1 ರಿಂದ 36) | 4224046.60 | 105601.17 |
| 2 | | ಮಾಂಸಾಹಾರ ಆಹಾರ ಪದಾರ್ಥಗಳು (1 ರಿಂದ 9) | 4429247.00 | 110731.18 |
| 3 | | ಡಾಟಾ ಎಂಟ್ರಿ ಆಪರೇಟರ್ ಮತ್ತು 'ಡಿ'-ಗ್ರೂಪ್ ಸಿಬ್ಬಂದಿ ಪೂರೈಕೆ | 2670466.15 | 66762.00 |

**ಷರತ್ತುಗಳು** : (1). ಯುನಿಟ್ ನಂ.1 ರಲ್ಲಿ ನಮೂದಿಸಿದ ಸಸ್ಯಾಹಾರ ಆಹಾರ ಪದಾರ್ಥಗಳಿಗೆ ಹಾಗೂ ಯುನಿಟ್ ನಂ.2 ರ ಮಾಂಸಾಹಾರ ಸಾಮಗ್ರಿಗಳಿಗೆ ಮತ್ತು ಕ್ರಮ ಸಂಖ್ಯೆ ; 3 ರ ಹೊರಗುತ್ತಿಗೆ ಸಿಬ್ಬಂದಿಗಳ ಪೂರೈಕೆಗೆ ಸಂಬಂಧಿಸಿದಂತೆ, ದರವನ್ನು ಪ್ರತ್ಯೇಕವಾಗಿ ಇ-ಟೆಂಡರನಲ್ಲಿ ನೀಡತಕ್ಕದ್ದು. (2). ಇ-ಪೋರ್ಟಲ್‌ನಲ್ಲಿ ಟೆಂಡರ ದಾಖಲೆಗಳು ಚಾಲ್ತಿಗೆ ಬರುವ ದಿನಾಂಕ : **26-09-2024.** (3). ಬಿಡ್‌ಗಳನ್ನು ಇ-ಪೋರ್ಟಲ್‌ನಲ್ಲಿ ಸಲ್ಲಿಸಲು ಕೊನೆಯ ದಿನಾಂಕ : **03-10-2024** ರ ಅಪರಾಹ್ನ 4.00 ಘಂಟೆಗೆ. (4). ತಾಂತ್ರಿಕ ಬಿಡ್ ತೆರೆಯುವ ದಿನಾಂಕ : **04-10-2024** ರ ಮುಂಜಾನೆ 11.00 ಘಂಟೆಗೆ ತೆರೆಯಲಾಗುವುದು. (5). ಆರ್ಥಿಕ ಬಿಡ್ ತೆರೆಯುವ ದಿನಾಂಕ : **07-10-2024** ರ ಮುಂಜಾನೆ 11.00 ಘಂಟೆಗೆ ತೆರೆಯಲಾಗುವುದು. (6). ಇ.ಎಂ.ಡಿ.ಗಳು ಇ-ಪೋರ್ಟಲ್‌ನಲ್ಲಿ ತಿಳಿಸಿರುವ ಯಾವುದಾದರೂ ಒಂದು ರೀತಿಯಲ್ಲಿರತಕ್ಕದ್ದು. ಮತ್ತು ಅವುಗಳ ಚಲಾವಣೆ ಟೆಂಡರ್ ತೆರೆಯುವ ದಿನಾಂಕದಿಂದ ಕನಿಷ್ಠ **90** ದಿನಗಳವರೆಗೆ ಇರತಕ್ಕದ್ದು. (7). ಯಾವುದೇ ಟೆಂಡರಗಳನ್ನು ಒಪ್ಪಿಕೊಳ್ಳುವ ಅಥವಾ ತಿರಸ್ಕರಿಸುವ ಹಾಗೂ ಆಡಳಿತಾತ್ಮಕ ಕಾರಣಗಳಿಂದ ಷರತ್ತುಗಳನ್ನು ಸೇರಿಸುವ, ಪರಿಷ್ಕರಿಸುವ, ಕೈಬಿಡುವ ಅಧಿಕಾರ ಈ ಕೆಳ ಸಹಿದಾರರಿಗೆ ಇರುತ್ತದೆ. (8). ಹೆಚ್ಚಿನ ವಿವರಗಳನ್ನು **https://kppp.karnataka.gov.in** ಇ-ಪೋರ್ಟಲ್ ಮುಖಾಂತರ ಪಡೆಯಬಹುದು.

ಸಹಿ/- ಕಾರ್ಯನಿರ್ವಾಹಕ ನಿರ್ದೇಶಕರು ಗದಗ ಮೃಗಾಲಯ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು,ಗದಗ ವಿಭಾಗ, ಗದಗ.

ವಾಸಾಸಂಇ/ಗದಗ/ಕೆ.ಎಸ್.ಎಂ.ಸಿ.ಎ/252/2024-25



ಕರ್ನಾಟಕ ಸರ್ಕಾರ (ಮೀನುಗಾರಿಕೆ ಇಲಾಖೆ)

**ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮುಂಡರಗಿ**

ಆದೇಶ ಸಂ:ಪಸಂಮೀ/125ಮೀಇಇ/2013, ಬೆಂಗಳೂರು ದಿನಾಂಕ:21-02-2014
ಆದೇಶ ಸಂ:ಪಸಂಮೀ/ಇ-84/ಮೀಇಇ/2022, ಬೆಂಗಳೂರು ದಿನಾಂಕ:25/05/2022

ಇ ಟೆಂಡರ ಪ್ರಕಟಣೆ ಸಂಖ್ಯೆ: GDG/MDG/01/2024-25 ದಿನಾಂಕ : 27-09-2024

**ಇ-ಟೆಂಡರ್ ಪ್ರಕಟಣೆ - ಅನುಬಂಧ-12**

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ಗದಗ ಜಿಲ್ಲೆಯ ಮುಂಡರಗಿ, ಶಿರಹಟ್ಟಿ, ಮತ್ತು ಲಕ್ಷ್ಮೇಶ್ವರ ತಾಲ್ಲೂಕಿನ ಈ ಕೆಳಕಂಡ ಸರ್ಕಾರಿ ಜಲಸಂಪನ್ಮೂಲಗಳ (ಕೆರೆಗಳ) ಮೀನು ಪಾಶುವಾರು ಹಕ್ಕನ್ನು 2024-25 ನೇ ಮೀನುಗಾರಿಕೆ ಫಸಲಿ ವರ್ಷ ದಿಂದ 2028-29 ನೇ ಮೀನುಗಾರಿಕೆ ಫಸಲಿ ವರ್ಷದವರೆಗೆ (ಅಂದರೆ ದಿನಾಂಕ: 01/07/2024 ರಿಂದ 30/06/2029 ವರೆಗೆ) ಒಟ್ಟು 5 (ಐದು) ವರ್ಷಗಳ ಅವಧಿಗೆ ಇ-ಟೆಂಡರು ಮೂಲಕ ಈ ಕೆಳಗೆ ನಮೂದಿಸಿರುವ ವೇಳಾಪಟ್ಟಿಯನ್ವಯ ಸರ್ಕಾರದ ಮೀನುಗಾರಿಕೆ ಇಲಾಖೆಯ ಷರತ್ತು ನಿಬಂಧನೆಗಳಿಗೊಳಪಟ್ಟಂತೆ ವಿಲೇವಾರಿ ಮಾಡಲು ಕರ್ನಾಟಕ ಸರ್ಕಾರ ಇ-ಸಂಗ್ರಹಣಾ ಪೋರ್ಟಲ್ **(https://kppp.karnataka.gov.in)** ಮೂಲಕ ಟೆಂಡರ್ ಅಹ್ವಾನಿಸಲಾಗಿದೆ.

**ವಿಲೇವಾರಿ ಮಾಡಲು ಪ್ರಸ್ತಾಪಿಸಿರುವ ಸರ್ಕಾರಿ ಜಲಸಂಪನ್ಮೂಲಗಳ (ಕೆರೆ) ವಿವರಗಳು**

| ಕ್ರ. ಸಂ | ಇ-ಟೆಂಡರ್ ಐಟಂ ಕೋಡ್ | ಕೆರೆ/ಜಲಸಂಪನ್ಮೂಲದ ಹೆಸರು | ಗ್ರಾಮದ ಹೆಸರು | ಜಲ ವಿಸ್ತೀರ್ಣ | ಅಚ್ಚುಕಟ್ಟು ಪ್ರದೇಶ | ಭದ್ರತಾ ಠೇವಣಿ (ರೂ.ಗಳಲ್ಲಿ) | ಸರ್ಕಾರಿ ಸವಾಲ್ ಮೊತ್ತ (ರೂ.ಗಳಲ್ಲಿ) | ನಿಗದಿ ಪಡಿಸಿದ ಮೀಸಲಾತಿ |
|---|---|---|---|---|---|---|---|---|
| **ಮುಂಡರಗಿ** | | | | | | | | |
| 1 | DOF/2024-25/SE1495 | ಚಿಕ್ಕವಡ್ಡಟ್ಟಿ ಕೆರೆ | ಚಿಕ್ಕವಡ್ಡಟ್ಟಿ | 14.00 | 119.88 | 630 | 2100 | ಸಾಮಾನ್ಯ |
| 2 | DOF/2024-25/SE1496 | ಕೇಲೂರ ಕೆರೆ | ಕೇಲೂರು | 99.00 | 208.98 | 4455 | 14850 | ಪರಿಶಿಷ್ಟ ಪಂಗಡ |
| **ಶಿರಹಟ್ಟಿ** | | | | | | | | |
| 3 | DOF/2024-25/SE1497 | ಕಡಕೋಳ ಕೆರೆ | ಕಡಕೋಳ | 17.37 | 126.7 | 782 | 2606 | ಸಾಮಾನ್ಯ |
| 4 | DOF/2024-25/SE1498 | ಜಲ್ಲಿಗೇರಿ ಕೆರೆ | ಜಲ್ಲಿಗೇರಿ | 20.97 | 94 | 944 | 10800 | ಪರಿಶಿಷ್ಟ ಜಾತಿ |
| 5 | DOF/2024-25/SE1493 | ಬಾಲೆಹೊಸುರ ಕೆರೆ | ಬಾಲೆಹೊಸುರು | 31.97 | 131.93 | 1439 | 5250 | ಸಾಮಾನ್ಯ |
| **ಲಕ್ಷ್ಮೇಶ್ವರ** | | | | | | | | |
| 6 | DOF/2024-25/SE1499 | ಪೇಠಬಣ ಕೆರೆ | ಲಕ್ಷ್ಮೇಶ್ವರ | 12.30 | - | 554 | 4463 | ಸಾಮಾನ್ಯ |

**ಇ-ಟೆಂಡರ್ ವೇಳಾಪಟ್ಟಿ :**

(1) ಇ-ಟೆಂಡರ್ ದಸ್ತಾವೇಜು ಪಡೆಯುವ ದಿನಾಂಕ : **27-09-2024** (2) ಇ-ಟೆಂಡರ್ ಬಿಡ್ ಸಲ್ಲಿಕೆ ಅಂತಿಮ ದಿನಾಂಕ ಮತ್ತು ಸಮಯ : **14-10-2024** 05:30:00 (3) ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ : ಸ್ಥಳ : **16-10-2024** 11:01:00 ಮೀನುಗಾರಿಕೆ ಉಪನಿರ್ದೇಶಕರು ಗದಗ ಕಚೇರಿ (4) ಆರ್ಥಿಕ ಬಿಡ್ ತೆರೆಯುವ ದಿನಾಂಕ ಮತ್ತು ಸಮಯ: ಸ್ಥಳ : **18-10-2024** 11:02:00 ಮೀನುಗಾರಿಕೆ ಉಪನಿರ್ದೇಶಕರು ಗದಗ ಕಚೇರಿ

ಹೆಚ್ಚಿನ ಮಾಹಿತಿಗಾಗಿ **https://kppp.karnataka.gov.in** ಇ-ಸಂಗ್ರಹಣಾ ಪೋರ್ಟಲ್ ಬೇಟಿ ಮಾಡುವುದು.

ವಾಸಾಸಂಇ/ಗದಗ/ಕೆಎಸ್ಎಂಸಿಎ/255/2024-25

ಸಹಿ/- ಮೀನುಗಾರಿಕೆ ಸಹಾಯಕ ನಿರ್ದೇಶಕರು, ಮುಂಡರಗಿ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka